# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 254 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 28-04-2024 ಭಾನುವಾರ | ಪುಟ: 4 | ಬೆಲೆ : ರೂ.2-00
Volume - 01 Issue - 254 | Title- Code: KARKAN 28269 | Chitradurga | Date: 28-04-2024 Sunday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಜಪಾನಂದಸ್ವಾಮೀಜಿಯಿಂದ 374 ಟನ್ ಮೇವು ಉಚಿತ ವಿತರಣೆ 2
ಮೋದಿಜೀ ಅಂತಹ ನಾಯಕ ಸಿಗೋದಿಲ್ಲ: ಗಾಯಿತ್ರಿ ಸಿದ್ದೇಶ್ವರ 3
ಅಂಬೇಡ್ಕರ್, ಗಾಂಧಿ ಶತ್ರುಗಳೇ-ಮಿತ್ರರೇ..... ಉದಾಹರಣೆ ಮತ್ತು ಎಚ್ಚರಿಕೆ...... 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಕೃಷಿ ಪ್ರಾಯೋಗಿಕ ತರಬೇತಿ: ಮೇ 8 ಮತ್ತು 9ಕ್ಕೆ ಮುಂದೂಡಿಕೆ

» ಚಿತ್ರದುರ್ಗ

2024-25ನೇ ಸಾಲಿಗೆ ಕೃಷಿ ಕೋಟಾದಡಿ ರಾಜ್ಯದ ಕೃಷಿ ಹಾಗೂ ಕೃಷಿ ಸಂಬಂಧಿತ ವಿಶ್ವವಿದ್ಯಾನಿಲಯಗಳಿಗೆ ಸ್ನಾತಕ ಪದವಿಗಳಿಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ನಗರದ ಎ.ಪಿ.ಎಂ.ಸಿ ಆವರಣದ ಕೃಷಿ ತಂತ್ರಜ್ಞರ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ಪ್ರಾಯೋಗಿಕ ತರಬೇತಿಯನ್ನು ಮೇ 8 ಮತ್ತು 9ಕ್ಕೆ ಮುಂದೂಡಿಕೆ ಮಾಡಲಾಗಿದೆ. ಕೃಷಿ ಪ್ರಾಯೋಗಿಕ ತರಬೇತಿಯನ್ನು ಈ ಹಿಂದೆ ಮೇ 6 ಮತ್ತು 7ರಂದು ನಡೆಸಲು ಉದ್ದೇಶಿಸಲಾಗಿತ್ತು. ಶಿವಮೊಗ್ಗ ಲೋಕಸಭಾ ಕ್ಷೇತ್ರದ ಚುನಾವಣೆಯ ಕಾರಣದಿಂದ ಕೃಷಿ ಪ್ರಾಯೋಗಿಕ ತರಬೇತಿಯನ್ನು ಮೇ 8 ಮತ್ತು 9ಕ್ಕೆ ಮುಂದೂಡಲಾಗಿದೆ. 024ರ ಮೇ 14ರಂದು 17 ಕೇಂದ್ರಗಳಲ್ಲಿ ನಿಗಧಿಯಾಗಿರುವ ಪ್ರಾಯೋಗಿಕ ಪರೀಕ್ಷೆ ಕುರಿತ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ 2024ರ ಏಪ್ರಿಲ್ 6ರ ಪರಿಸ್ಕೃತ ಅಧಿಸೂಚನೆಯ ಪ್ರತಿಯನ್ನು ಸಂಸ್ಥೆಯ ಆವರಣದಲ್ಲಿ ಪ್ರಕಟಿಸಲಾಗಿದ್ದು, ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ 9742455666 ಅಥವಾ 9448656231 ದೂರವಾಣಿ ಮೂಲಕ ಸಂಪರ್ಕಿಸಬಹುದು ಎಂದು ಐಎಟಿ ಸಂಸ್ಥೆಯ ಅಧ್ಯಕ್ಷ ಜಿ.ಸಿ.ರಂಗಸ್ವಾಮಿ ತಿಳಿಸಿದ್ದಾರೆ.

# ಮತದಾನದ ನಂತರ ಅಭ್ಯರ್ಥಿಗಳು.....

## ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ



ಚುನಾವಣೆ ಶಾಂತಿಯುತವಾಗಿ ನಡೆಯಲು ಸಹಕರಿಸಿದ ಎಲ್ಲರಿಗೂ ಪತ್ರಿಕಾಗೋಷ್ಠಿಯಲ್ಲಿ ಕೃತಜ್ಞತೆಗಳನ್ನು ಸಲ್ಲಿಸಿದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ.

» ಚಿತ್ರದುರ್ಗ

ಕ್ಷೇತ್ರದ ಹದಿನೆಂಟುವರೆ ಸಾವಿರ ಮತದಾರರು ಶುಕ್ರವಾರ ನಡೆದ ಚುನಾವಣೆಯಲ್ಲಿ ನನ್ನ ಭವಿಷ್ಯ ನಿರ್ಣಯಿಸುತ್ತಾರೆ. ತೀರ್ಪು ಆಶಾದಾಯಕವಾಗಿರುತ್ತೆ ಎನ್ನುವ ಅಚಲವಾದ ನಂಬಿಕೆಯಿದೆ ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಪಕ್ಷದ ಸಾಮಾನ್ಯ ಕಾರ್ಯಕರ್ತನಿಂದ ಹಿಡಿದು ಮುಖಂಡರುಗಳು ಸೇರಿ ಚುನಾವಣೆಯನ್ನು ಪ್ರಾಮಾಣಿಕವಾಗಿ ಎದುರಿಸಿದ್ದಾರೆ. ರಾಜ್ಯ, ರಾಷ್ಟ್ರ ನಾಯಕರುಗಳು ಇಲ್ಲಿಗೆ ಬಂದು ನನ್ನ ಪರ ಮತಯಾಚನೆ ಮಾಡಿ ಹೋಗಿದ್ದಾರೆ. ಎಲ್ಲಿಯೂ ಅಹಿತಕರ ಘಟನೆಗಳಿಗೆ ಆಸ್ಪದವಿಲ್ಲದಂತೆ ಮತದಾನ ಶಾಂತಿಯುತವಾಗಿ ನಡೆದಿದೆ. ಕ್ಷೇತ್ರದ ಹದಿನೆಂಟುವರೆ ಲಕ್ಷ ಮತದಾರರು, ಅಧಿಕಾರಿ ವರ್ಗದವರು ಹಾಗೂ ಪಕ್ಷಾತೀತವಾಗಿ ಸಹಕರಿಸಿದ ಮಾಧ್ಯಮದವರಿಗೂ ಕೃತಜ್ಞತೆ ಸಲ್ಲಿಸಲು ಇಚ್ಛಿಸುತ್ತೇನೆಂದರು.

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಐದು ಗ್ಯಾರೆಂಟಿಗಳು ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಪಕ್ಷಕ್ಕೆ ವರದಾನವಾಗಿದೆ ಎನ್ನುವುದು ನಿನ್ನೆ ನಡೆದ ಚುನಾವಣೆಯಲ್ಲಿ ಮಹಿಳೆಯರ ಮುಖದಲ್ಲಿನ ಭಾವನೆಗಳಲ್ಲಿ ಕಂಡು ಬರುತ್ತಿತ್ತು. ಒಟ್ಟಾರೆ ಚುನಾವಣೆ ಸುಸೂತ್ರವಾಗಿ ನಡೆದಿದೆ. ಫಲಿತಾಂಶ ಬರುವತನಕ ಸಮಾಧಾನದಿಂದ ಎಲ್ಲರೂ ಕಾಯಬೇಕು. ಅವಸರ ಮಾಡಿದರೆ ಅಪಘಾತವಾಗುತ್ತದೆ ಎಂದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಕಾರ್ಯಾಧ್ಯಕ್ಷ ಕೆ.ಎಂ.ಹಾಲಸ್ವಾಮಿ, ಜಿಲ್ಲಾ ಕಾಂಗ್ರೆಸ್ ಪ್ರಧಾನಕಾರ್ಯದರ್ಶಿಗಳಾದಕೆ.ಪಿ.ಸಂಪತ್‌ಕುಮಾರ್, ಡಿ.ಎನ್.ಮೈಲಾರಪ್ಪ, ಉಪಾಧ್ಯಕ್ಷ ಕುಮಾರ್‌ಗೌಡ, ಚಿತ್ರದುರ್ಗ ನಗರಾಭಿವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಿ.ಟಿ.ಜಗದೀಶ್, ದ್ರಾಕ್ಷಾ ರಸ ಮಂಡಳಿ ಚೇರ್ಮನ್ ಬಿ.ಯೋಗೇಶ್‌ಬಾಬು, ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ಜಯಣ್ಣ, ಯೂತ್ ಕಾಂಗ್ರೆಸ್ ಅಧ್ಯಕ್ಷ ಕಾರೇಹಳ್ಳಿ ಉಲ್ಲಾಸ್, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಯು.ಲಕ್ಷ್ಮಿಕಾಂತ್, ಜಿ.ವಿ.ಮಧುಗೌಡ, ಬಾಲಕೃಷ್ಣಸ್ವಾಮಿ, ಗ್ಯಾರೆಂಟಿ ಅನುಷ್ಠಾನಗಳ ಸಮಿತಿ ಅಧ್ಯಕ್ಷ ಆರ್.ಶಿವಣ್ಣ, ಪ್ರೊಫೆಷನಲ್ ವಿಭಾಗದ ಅಧ್ಯಕ್ಷ ಮಹಡಿ ಶಿವಮೂರ್ತಿ, ನೇತ ಇನ್ನು ಅನೇಕರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

## ಚುನಾಯಿಸಿದರೆ ಖುಷಿಯಿಂದ ಜನಸೇವೆ ಮಾಡುವೆ: ಕಾರಜೋಳ



» ಚಿತ್ರದುರ್ಗ

ದೇಶಕ್ಕೆ ಸ್ವಾತಂತ್ರ್ಯ ಸಿಕ್ಕು ಎಪ್ಪತ್ತು ವರ್ಷಗಳಾಗಿದ್ದರು ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿರುವ ಇಲ್ಲಿನ ಜನ ಮುಗ್ದರು ಅಮಾಯಕರು, ಕುಡಿಯುವ ನೀರಿಗೂ ಸಮಸ್ಯೆಯಿದೆ ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳ ಬೇಸರ ವ್ಯಕ್ತಪಡಿಸಿದರು.

ಲೋಕಸಭೆ ಚುನಾವಣೆಯ ಮತದಾನ ಮುಗಿದ ಮರುದಿನ ಶನಿವಾರ ಚಾಲುಕ್ಯ ಹೋಟೆಲ್‌ನಲ್ಲಿ ಚಹ ಸೇವಿಸಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು ಚಿತ್ರದುರ್ಗ ಜಿಲ್ಲೆಯ ಆರು ವಿಧಾನಸಭೆ ಹಾಗೂ ಶಿರಾ ಪಾವಗಡ ಸೇರಿದಂತೆ ಮೂರು ಸಾವಿರದ ಹಳ್ಳಿಗಳಿಗೆ ಸುತ್ತಾಡಿ ಮತಯಾಚಿಸಲು ಸಮಯ ಸಾಕಾಗಲಿಲ್ಲ. ಎಷ್ಟು ಸಾಧ್ಯವೋ ಅಷ್ಟು ಕಡೆ ಮತದಾರರನ್ನು ಭೇಟಿ ಮಾಡಿ ಮತ ಕೇಳಿದ್ದೇನೆ. ಗೆಲ್ಲಿಸಿ ಪಾರ್ಲಿಮೆಂಟ್‌ಗೆ ಕಳಿಸಿಕೊಟ್ಟರೆ ಖುಷಿಯಿಂದ ಕ್ಷೇತ್ರದ ಜನರ ಸೇವೆ ಸಲ್ಲಿಸುತ್ತೇನೆಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ದೇಶದಲ್ಲಿ ನಡೆಯುತ್ತಿರುವ ಘಟನೆಗಳನ್ನು ನೋಡಿರುವ ಜನ ದೇಶ ಸುಭದ್ರವಾಗಿರಬೇಕಾದರೆ ಯಾರ ಕೈಗೆ ಅಧಿಕಾರ ಕೊಡಬೇಕು. ಯಾರು ಈ ದೇಶದ ಪ್ರಧಾನಿಯಾಗಬೇಕೆಂಬ ಜಾಗೃತಿ ಕ್ಷೇತ್ರದ ಮತದಾರರಲ್ಲಿ ಮೂಡಿರುವುದು ಅತ್ಯಂತ ಸಂತೋಷದ ಸಂಗತಿ. ಈ ನಿಟ್ಟಿನಲ್ಲಿ ಜನ ಯೋಚಿಸಿ ಮತದಾನ ಮಾಡಿದ್ದಾರೆಂಬ ನಂಬಿಕೆಯಿದೆ. ಚುನಾವಣೆಯಲ್ಲಿ ಮಾತ್ರ ಪಕ್ಷದಿಂದ ಸ್ಪರ್ಧಿಸಿ ರಾಜಕೀಯ ಮಾಡುವುದು ಅನಿವಾರ್ಯ ಮತದಾನ ಮುಗಿದ ನಂತರ ನಾನು ಕ್ಷೇತ್ರದ ಹದಿನೆಂಟುವರೆ ಲಕ್ಷ ಮತದಾರರ ಜನಪ್ರತಿನಿಧಿ. ಯಾವುದೇ ತಾರತಮ್ಯವಿಲ್ಲದೆ ನಿಸ್ಪಕ್ಷಪಾತವಾಗಿ ಎಲ್ಲರ ಸೇವೆ ಮಾಡಲು ಸಿದ್ದ ಎಂದು ತಿಳಿಸಿದರು. ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ವಕ್ತಾರ ನಾಗರಾಜ್‌ಬೇದ್ರೆ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.




## ಫಾಸ್ಟ್ ನ್ಯೂಸ್

### ಮತದಾನದ ಜಾಗೃತಿ ಜಾಥಾ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಸಭಿವೃದ್ಧಿ ಇಲಾಖೆ ವತಿಯಿಂದ ಸಾರ್ವತ್ರಿಕ ಲೋಕಸಭಾ ಚುನಾವಣೆ ಅಂಗವಾಗಿ ಏಪ್ರಿಲ್ 29 ರಂದು ಸಂಜೆ 5 ಗಂಟೆಗೆ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿರಿಂದ ಮತದಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಜಾಥಾವು ಹೈಸ್ಕೂಲ್ ಮೈದಾನದ ಬೀರಲಿಂಗೇಶ್ವರ ದೇವಸ್ಥಾನದಿಂದ ಆರಂಭವಾಗಿ ಪಿ.ಬಿ.ರಸ್ತೆ, ಹಳೇ ಬಸ್ ನಿಲ್ದಾಣ, ಗಾಂಧಿ ಸರ್ಕಲ್, ಅಶೋಕ ರಸ್ತೆಯ ಮೂಲಕ ಜಯದೇವ ಸರ್ಕಲ್ ಬಳಿ ಬಂದು ಕ್ಯಾಂಡಲ್ ಹಚ್ಚಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಿಕಿ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ.

### ಸಾಕು ಪ್ರಾಣಿಗಳ ರ್‍ಯಾಂಪ್ ವಾಕ್



» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸ್ವೀಪ್ ಸಮಿತಿ, ಹಾಗೂ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ, ಸಾರ್ವತ್ರಿಕ ಲೋಕಸಭಾ ಚುನಾವಣೆಗೆ ಅಂಗವಾಗಿ ಮೇ.1 ರಂದು ಸಂಜೆ 5 ಗಂಟೆಗೆ ನಗರದ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು, ಬಾಸ್ಕೆಟ್ ಬಾಲ್ ಗ್ರೌಂಡ್‌ನಲ್ಲಿ ಸಾಕು ಪ್ರಾಣಿಗಳ ರ್‍ಯಾಂಪ್ ವಾಕ್ ನ್ನು ಆಯೋಜಿಸಲಾಗಿದೆ. ಮತದಾನ ಜಾಗೃತಿ ಅಂಗವಾಗಿ ಏರ್ಪಡಿಸಿದ ಸಾಕು ಪ್ರಾಣಿಗಳ ರ್‍ಯಾಂಪ್ ವಾಕ್‌ನಲ್ಲಿ ಭಾಗವಹಿಸುವ ಸಾಕುಪ್ರಾಣಿ(ನಾಯಿ,ಬೆಕ್ಕು) ಗಳಿಗೆ ಉಚಿತವಾಗಿ ರೇಬಿಸ್ ಲಸಿಕೆ ಮತ್ತು ಜಂತು ನಾಶಕ ಔಷಧಿಗಳನ್ನು ವಿತರಣೆ ಮಾಡಲಾಗುವುದು. ಕಾರ್ಯಕ್ರಮದಲ್ಲಿ ಭಾಗವಹಿಸಿದ ನಗರ ಹಾಗೂ ಸುತ್ತಮುತ್ತಲಿನ ಸಾಕುಪ್ರಾಣಿ(ನಾಯಿ,ಬೆಕ್ಕು) ಗಳ ಮಾಲೀಕರಿಗೆ ಸೂಕ್ತ ಬಹುಮಾನ ನೀಡಲಾಗುವುದು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪ ನಿರ್ದೇಶಕರಾದ ಡಾ. ಚಂದ್ರಶೇಖರ್ ಎಸ್ ಸುಂಕದ ತಿಳಿಸಿದ್ದಾರೆ.

### ತಾಲ್ಲೂಕಿನಿಂದ ತಾಲ್ಲೂಕಿಗೆ ತೆರಳಲು ಬಸ್ ವ್ಯವಸ್ಥೆ

» ದಾವಣಗೆರೆ

ಲೋಕಸಭಾ ಚುನಾವಣಾ ಮತಗಟ್ಟೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಏಪ್ರಿಲ್ 30 ರಂದು ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಎರಡನೇ ಹಂತದ ತರಬೇತಿ ನಡೆಯುತ್ತಿದೆ. ಈ ವೇಳೆ ತರಬೇತಿಗೆ ನಿಯೋಜಿತರಾದ ತಾಲ್ಲೂಕುಗಳಿಗೆ ತೆರಳಲು ಒಂದು ತಾಲ್ಲೂಕಿನಿಂದ ಮತ್ತೊಂದು ತಾಲ್ಲೂಕಿಗೆ ಮಸ್ಟರಿಂಗ್ ಸ್ಥಳದಿಂದ ಕೆಎಸ್‌ಆರ್‌ಟಿಸಿ ಬಸ್ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ. ಎಲ್ಲಾ ತಾಲ್ಲೂಕುಗಳಿಂದ 82 ಬಸ್‌ಗಳು ಕಾರ್ಯಾಚರಣೆ ನಡೆಸಲಿದ್ದು ಒಂದು ತಾಲ್ಲೂಕಿನಿಂದ ಬೇರೆ ಎಲ್ಲಾ ತಾಲ್ಲೂಕುಗಳಿಗೂ ಬಸ್‌ಗಳ ಸಂಚರಿಸಲಿವೆ. ಜಗಳೂರಿನಿಂದ ಬೇರೆ ತಾಲ್ಲೂಕುಗಳಿಗೆ 13 ಬಸ್ ಹೊರಡಲಿದ್ದು ಇಲ್ಲಿಗೆ ಬೇರೆ ತಾಲ್ಲೂಕುಗಳಿಂದ 16 ಬರಲಿವೆ. ಹರಿಹರದಿಂದ 13 ಹೊರಡಲಿದ್ದು 11 ಬರಲಿವೆ, ದಾವಣಗೆರೆ ಉತ್ತರ 11 ಹೋಗಲಿದ್ದು 9 ಬರಲಿವೆ, ದಕ್ಷಿಣ 4 ಹೊರಡಲಿದ್ದು 9 ಬಸ್‌ಗಳು ಬರಲಿವೆ. ಮಾಯಕೊಂಡ ಕ್ಷೇತ್ರ 9 ಬಸ್‌ಗಳು ಹೊರಡಲಿದ್ದು 10 ಬರಲಿವೆ. ಚನ್ನಗಿರಿ 16 ಬಸ್ ಹೊರಡಲಿದ್ದು 14 ಬರಲಿವೆ. ಹಾಗೂ ಹೊನ್ನಾಳಿಯಿಂದ 16 ಬಸ್‌ಗಳು ಹೊರಡಲಿದ್ದು 13 ಬೇರೆ ತಾಲ್ಲೂಕುಗಳಿಂದ ಇಲ್ಲಿಗೆ ಬರಲಿವೆ. ತರಬೇತಿಗೆ ನಿಯೋಜಿತರಾದ ಅಧಿಕಾರಿಗಳು, ಸಿಬ್ಬಂದಿಗಳು ನಿಯೋಜಿತ ತಾಲ್ಲೂಕುಗಳಿಗೆ ತೆರಳಲು ಬೆಳಗ್ಗೆ 8 ಗಂಟೆಯೊಳಗಾಗಿ ಆಯಾ ತಾಲ್ಲೂಕಿನಲ್ಲಿ ಗುರುತಿಸಲಾದ ಸ್ಥಳದಲ್ಲಿರಲು ತಿಳಿಸಲಾಗಿದೆ.

### ಮದ್ಯ ಮಾರಾಟ ನಿಷೇಧ

» ದಾವಣಗೆರೆ

ಪ್ರಧಾನಮಂತ್ರಿಯವರು ಏಪ್ರಿಲ್ 28 ರಂದು ದಾವಣಗೆರೆಗೆ ಆಗಮಿಸಿ ಹೈಸ್ಕೂಲ್ ಮೈದಾನದಲ್ಲಿ ಆಯೋಜಿಸಿರುವ ಚುನಾವಣಾ ಪ್ರಚಾರ ರ್‍ಯಾಲಿಯಲ್ಲಿ ಭಾಗವಹಿಸುವುದರಿಂದ ಭದ್ರತೆ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು ಏಪ್ರಿಲ್ 28 ರ ಬೆಳಗ್ಗೆ 7 ಗಂಟೆಯಿಂದ ಸಂಜೆ 7 ಗಂಟೆಯವರೆಗೆ ದಾವಣಗೆರೆ ಹಾಗೂ ಹರಿಹರ ತಾಲ್ಲೂಕಿನಾದ್ಯಂತ ಮದ್ಯ ಮಾರಾಟ ನಿಷೇಧಿಸಿ ಮದ್ಯದಂಗಡಿ ಮುಚ್ಚಲು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಆದೇಶಿಸಿದ್ದಾರೆ.

### ಹುಬ್ಬಳ್ಳಿಯ 'ಸೆನ್ಸ್ ಎಸೆನ್ಸ್' ಸಂಸ್ಥೆಯಿಂದ ಅಂಧರಿಗಾಗಿ ಸಿದ್ಧಪಡಿಸಿದ ಪುಸ್ತಕ

# ಪ್ರಾಮಿಸ್ಡ್ ನೇಷನ್ ಪ್ರಧಾನಿಗೆ ಅರ್ಪಣೆ

» ಬೆಂಗಳೂರು

ದೇಶದ ಏಳು ಕೋಟಿ ಅಂಧರು, ದೃಷ್ಟಿದೋಷವಿದ್ದವರು ಪ್ರಧಾನಿ ನರೇಂದ್ರ ಮೋದಿಯವರ ಜೀವನ, ಕಾರ್ಯ ಮತ್ತು ನಾಯಕತ್ವದ ಬಗ್ಗೆ ತಿಳಿದುಕೊಳ್ಳಲು ಅನುಕೂಲವಾಗಲಿ ಎಂಬ ಉದ್ದೇಶದಿಂದ ಹುಬ್ಬಳ್ಳಿ ಮೂಲದ ಟೀಮ್ ಸೆನ್ಸ್ ಎಸೆನ್ಸ್ ಸಂಸ್ಥೆಯು ಬ್ರೈಲ್ ಲಿಪಿಯಲ್ಲಿ ಸಿದ್ಧಪಡಿಸಿದ ಎ ಪ್ರಾಮಿಸ್ಡ್ ನೇಷನ್ ಹಾನರೇಬಲ್ ಶ್ರೀ ನರೇಂದ್ರ ಮೋದಿ – ದ ಮೇಕರ್ ಆಫ್ ನ್ಯೂ ಇಂಡಿಯಾ ಎಂಬ ಪುಸ್ತಕವನ್ನು ಇತ್ತೀಚೆಗೆ ಪ್ರಧಾನಿಯವರಿಗೆ ಅರ್ಪಿಸಲಾಯಿತು.

ಸೆನ್ಸ್ ಎಸೆನ್ಸ್ ಸಂಸ್ಥೆಯ ರುಷಾಲಿ ಭಂಡಾರಿ ಮತ್ತು ಯಶ್ವಿ ಭಂಡಾರಿ ಅವರು ಅತ್ಯಂತ ಕಾಳಜಿಯಿಂದ ಸಿದ್ಧಪಡಿಸಿದ ಈ ವಿಶೇಷ ಪುಸ್ತಕವನ್ನು ವಿಆರ್‌ಎಲ್ ಸಮೂಹ ಸಂಸ್ಥೆಯ ಸಹಯೋಗ ಮತ್ತು ಪ್ರಾಯೋಜಕತ್ವದಲ್ಲಿ ಹೊರತರಲಾಗಿದೆ. ದೇಶದ ಎರಡೂವರೆ ಲಕ್ಷ ಅಂಧ ಮಕ್ಕಳು ಹಾಗೂ ಕಣ್ಣಿನ ಸಮಸ್ಯೆ ಎದುರಿಸುತ್ತಿರುವ 7 ಕೋಟಿ ಜನರು ಪ್ರಧಾನಿ ನರೇಂದ್ರ ಮೋದಿ ಅವರ ಬಗ್ಗೆ ಈ ಪುಸ್ತಕದಿಂದ ಸಾಕಷ್ಟು ಮಾಹಿತಿ ಪಡೆದುಕೊಳ್ಳಬಹುದು.

ಬೆಂಗಳೂರಿಗೆ ಆಗಮಿಸಿದ್ದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾದ ವಿಆರ್‌ಎಲ್ ಸಮೂಹ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಆನಂದ ಸಂಕೇಶ್ವರ, ವಾಣಿ ಆನಂದ ಸಂಕೇಶ್ವರ, ರುಷಾಲಿ, ಯಶ್ವಿ ಅವರು ಪುಸ್ತಕದ ಐದು ಪ್ರತಿಗಳನ್ನು ಅರ್ಪಿಸಿದರು.




> ವಿಆರ್‌ಎಲ್ ಲಾಜಿಸ್ಟಿಕ್ ಲಿ. ವತಿಯಿಂದ ಕಾರ್ಪೋರೇಟ್ ಸಾಮಾಜಿಕ ಜವಾಬ್ದಾರಿ (ಸಿಎಸ್‌ಆರ್) ಅಡಿಯಲ್ಲಿ ನಾವು ಆರೋಗ್ಯ, ಶಿಕ್ಷಣ, ಕ್ರೀಡಾ ಕ್ಷೇತ್ರಗಳಲ್ಲಿ ಹಲವು ಜನರ ಜೀವನದಲ್ಲಿ ಅರ್ಥಪೂರ್ಣ ಬದಲಾವಣೆಗೆ ಪ್ರಯತ್ನಿಸಿದ್ದೇವೆ. ಈ ಕೆಲಸಗಳ ಸಕಾರಾತ್ಮಕ ಪರಿಣಾಮಗಳ ಬಗ್ಗೆ ನಮಗೆ ಹೆಮ್ಮೆಯಿದೆ. ಸಮಾಜದ ಎಲ್ಲರ ಏಳಿಗೆಗೆ ಪೂರಕವಾಗಿ ನಮ್ಮ ಪ್ರಯತ್ನಗಳನ್ನು ಮುಂದುವರಿಸುತ್ತಲೇ ಇರುತ್ತೇವೆ. ಪ್ರಧಾನಿ ಅವರ ಜೀವನ ಸಾಧನೆ ಮತ್ತು ಅವರ ಕೈಂಕರ್ಯಗಳು ಅಂಧರಿಗೂ ಪ್ರೇರಣೆ ಆಗಲಿ ಎನ್ನುವ ಸದುದ್ದೇಶದಿಂದ ಈ ಪುಸ್ತಕ ಪ್ರಕಟಿಸಲು ನೆರವಾಗಿದ್ದೇವೆ.
>
> ■ ಡಾ.ಆನಂದ ಸಂಕೇಶ್ವರ ವ್ಯವಸ್ಥಾಪಕ ನಿರ್ದೇಶಕರು, ವಿಆರ್‌ಎಲ್ ಸಮೂಹ ಸಂಸ್ಥೆ

ಪುಸ್ತಕದ ಮುಖಪುಟ ವೀಕ್ಷಿಸಿ, ಒಳಪುಟಗಳನ್ನು ತಿರುವಿ ಹಾಕುತ್ತ ಅತ್ಯಂತ ಆಸಕ್ತಿಯಿಂದ ವಿವರಗಳನ್ನು ಕೇಳಿ ತಿಳಿದುಕೊಂಡ ಮೋದಿಯವರು, ಇದೊಂದು ವಿಶಿಷ್ಟ ಕೃತಿಯಾಗಿದೆ. ನಿಜಕ್ಕೂ ವಿಶೇಷ ಸಾಧನೆ ಮಾಡಿದ್ದೀರಿ ಎಂದು ಪ್ರಶಂಸಿಸಿದರು. ವಿಆರ್‌ಎಲ್ ಸಮೂಹ ಸಂಸ್ಥೆಯ ಬೆಂಬಲದಿಂದ ಪುಸ್ತಕ ಹೊರತರಲು ಸಾಧ್ಯವಾಯಿತು. ಇದನ್ನು ಅಂಧರ ಶಾಲೆಗಳಿಗೆ ತಲುಪಿಸಲಾಗಿದೆ. ಆಸಕ್ತ ಅಂಧರಿಗೆ ಲಭಿಸುವಂತೆ ಮಾಡಲಾಗಿದೆ.

ನಮ್ಮ ದೇಶ ಮಾತ್ರವಲ್ಲ, ಅನ್ಯ ದೇಶಗಳ ಅಂಧರೂ ನಮ್ಮ ಪ್ರಧಾನಿಯವರ ಸಾಧನೆಗಳನ್ನು ತಿಳಿದುಕೊಳ್ಳಲು ಸಹಾಯ ಮಾಡುವ ಆಸೆಯಿದ್ದು, ವಿವಿಧ ದೇಶಗಳಿಗೆ ಪುಸ್ತಕವನ್ನು ತಲುಪಿಸುವ ಗುರಿ ಹೊಂದಿದ್ದೇವೆ ಎಂದು ರುಷಾಲಿ ಮತ್ತು ಯಶ್ವಿ ವಿವರಿಸಿದರು. ನಿಮ್ಮ ಗುರಿ ಒಳ್ಳೆಯದು ಹಾಗೂ ವಿಶಾಲವಾಗಿದೆ. ವಿಆರ್‌ಎಲ್ ಸಮೂಹ ಸಂಸ್ಥೆ ಇಂತಹ ಒಳ್ಳೆಯ ಪ್ರಯತ್ನವನ್ನು ಬೆಂಬಲಿಸಿ ಯಶಸ್ವಿಗೊಳಿಸಿರುವುದುಅಭಿನಂದನಾರ್ಹ ಎಂದು ಪ್ರಧಾನಿಯವರು ಹೇಳಿದರು.

ಡಾ. ಆನಂದ ಸಂಕೇಶ್ವರ ಅವರ ಕಾಳಜಿಯನ್ನು ಇದೇ ವೇಳೆ ಪ್ರಶಂಸಿಸಿದ ಮೋದಿಯವರು, ಬೇರೆ ಬೇರೆ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಲು ಪ್ರೋತ್ಸಾಹ ನೀಡುವ ಮೂಲಕ ಸಮಾಜಕ್ಕೆ ಕೊಡುಗೆ ನೀಡುತ್ತಿದ್ದೀರಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಪ್ರಧಾನಿ ನರೇಂದ್ರ ಮೋದಿಯವರ ಸಾಧನೆ ಕುರಿತ ಈ ಪುಸ್ತಕವನ್ನು ಕೇಂದ್ರ ಗೃಹಮಂತ್ರಿ ಅಮಿತ್ ಷಾ ಅವರು ಕಳೆದ ಜನವರಿಯಲ್ಲಿ ದೆಹಲಿಯಲ್ಲಿ ಬಿಡುಗಡೆ ಮಾಡಿದ್ದರು.

### ಉಷಾ ಕೃಷ್ಣಗೆ ಪುಸ್ತಕ ಕೊಡುಗೆ

ಜೀವನದಲ್ಲಿ ಒಮ್ಮೆಯಾದರೂ ಮೋದಿ ಅವರನ್ನು ನೋಡಲೇಬೇಕೆಂದು ಹಂಬಲಿಸುತ್ತಿದ್ದ ಬೆಂಗಳೂರಿನ ಉಷಾ ಕೃಷ್ಣ ಅವರ ಕನಸು ಮೊನ್ನೆ ಈಡೇರಿತು. ಶೇ.99 ದೃಷ್ಟಿದೋಷ ಇರುವ ಉಷಾ ಅವರೊಂದಿಗೆ ಮಾತನಾಡುತ್ತಲೇ ವಿಮಾನದಿಂದ ಎ ಪ್ರಾಮಿಸ್ಡ್ ನೇಷನ್ ಬ್ರೈಲ್ ಪುಸ್ತಕವನ್ನು ತರಿಸಿ ಹಸ್ತಾಂತರಿಸಿ ವಿಆರ್‌ಎಲ್ ಸಂಸ್ಥೆಯ ಶ್ರಮ ತಮಗೆ ಸಹಾಯವಾಗಲಿ ಎಂದು ಶುಭ ಹಾರೈಸಿದ್ದಾರೆ.

### ಜಪಾನಂದಸ್ವಾಮೀಜಿಯಿಂದ 374 ಟನ್ ಮೇವು ಉಚಿತ ವಿತರಣೆ

# ಸರ್ಕಾರದ ನಿರ್ಲಕ್ಷ್ಯಕ್ಕೆ ಸ್ವಾಮೀಜಿ ಬೇಸರ



» ಚಳ್ಳಕೆರೆ

ತಾಲ್ಲೂಕಿನಾದ್ಯಂತ ದೇವರ ಎತ್ತುಗಳೂ ಸೇರಿದಂತೆ ಸಾವಿರಾರು ಜಾನುವಾರುಗಳಿಗೆ ಮೇವನ್ನು ನೀಡದೆ ಸರ್ಕಾರ ನಿರ್ಲಕ್ಷ್ಯ ವಹಿಸಿರುವುದು ಸರಿಯಲ್ಲ. ಬರಗಾಲ ಹಿನ್ನೆಲೆಯಲ್ಲಿ ಗೋಶಾಲೆಗಳಿದ್ದರೂ ಅಲ್ಲಿಯೂ ಸಹ ಜಾನುವಾರುಗಳಿಗೆ ಸಮರ್ಪಕವಾಗಿ ಮೇವು ವಿತರಣೆಯಾಗುತ್ತಿಲ್ಲ. ಆದರೆ, ಸರ್ಕಾರದ ನಿರ್ಲಕ್ಷ್ಯದ ನಡುವೆಯೂ ಸುಧಾಮೂರ್ತಿ, ನಾರಾಯಣಮೂರ್ತಿಯವರ ಮೂರ್ತಿಟ್ರಸ್ಟ್ ವತಿಯಿಂದ ಮೇವು ವಿತರಣೆ ಮಾಡಲಾಗುತ್ತಿದೆ ಎಂದು ಪಾವಗಡದ ರಾಮಕೃಷ್ಣ ಸೇವಾಶ್ರಮದ ಶ್ರೀಜಪಾನಂದಸ್ವಾಮೀಜಿ ತಿಳಿಸಿದರು.

ಅವರು, ಅಜ್ಜಯ್ಯನಗುಡಿ ರಸ್ತೆ, ನನ್ನಿವಾಳ ಬೊಮ್ಮದೇವರ ಹಟ್ಟಿ, ರಾಯಪುರದ ದೇವರ ಎತ್ತುಗಳೂ ಸೇರಿದಂತೆ ಚಳ್ಳಕೆರೆ, ಮೊಳಕಾಲ್ಮೂರು ತಾಲ್ಲೂಕಿನ ದೇವರ ಎತ್ತುಗಳಿಗೆ ಮೂರ್ತಿಟ್ರಸ್ಟನಿಂದ ನೀಡಲಾದ ಮೇವನ್ನು ವಿತರಿಸಿ ಮಾತನಾಡಿದರು. 2018ರಿಂದ2024ರ ತನಕ ಇದುವರೆಗೂ ಒಟ್ಟು 374 ಟನ್ ಮೇವನ್ನು 43 ಹಟ್ಟಿಯ ಜಾನುವಾರುಗಳಿಗೆ ನೀಡಲಾಗಿದೆ. ಇದರ ಜೊತೆಯಲ್ಲೇ ಜಾನುವಾರುಗಳನ್ನು ಜವಾಬ್ದಾರಿಯುತವಾಗಿ ಕಾಪಾಡುವ ಕಿಲಾರಿಗಳಿಗೂ ಸಹ ಅಭಿನಂದನೆಯನ್ನು ಸಲ್ಲಿಸಲಾಗಿದೆ. ಯಾವುದೇ ಹಂತದಲ್ಲೂ ದೇವರ ಎತ್ತುಗಳು ಉಪವಾಸದಿಂದ ಇರುದಂತೆ ಜಾಗ್ರತೆ ವಹಿಸುವಂತೆ ಕಿಲಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಮೂರ್ತಿಟ್ರಸ್ಟ್ ವತಿಯಿಂದ ಇನ್ನೂ ಮುಂದಿನ ಹಲವಾರು ವರ್ಷಗಳ ಕಾಲ ಉಚಿತವಾಗಿ ಮೇವು ವಿತರಣೆ ಮಾಡುವ ಯೋಜನೆ ಇದೆ ಎಂದರು.

ಯಜಮಾನ ಚಿತ್ತಪ್ಪ, ಕಿಲಾರಿ ಕಾಟಪ್ಪ ಮಾತನಾಡಿ, ಮೂರ್ತಿ ಟ್ರಸ್ಟ್‌ವತಿಯಿಂದ ಸ್ವಾಮೀಜಿ ಮಾರ್ಗದರ್ಶನದಲ್ಲಿ ಉಚಿತವಾಗಿ ಮೇವು ಸರಬರಾಜು ಮಾಡಲಾಗುತ್ತಿದೆ. ಪ್ರತಿತಿಂಗಳು ಸ್ವಾಮೀಜಿ ಉಚಿತ ಮೇವಿನ ಟ್ರ್ಯಾಕ್ಟರ್‌ಗಳೊಂದಿಗೆ ಆಗಮಿಸಿ ಕಿಲಾರಿಗಳು, ಸಾರ್ವಜನಿಕರ ಸಮಕ್ಷಮದಲ್ಲಿ ಜಾನುವಾರಿಗಳಿಗೆ ಮೇವು ವಿತರಿಸುತ್ತಾರೆ. ಮೇವು ವಿತರಣೆಯಾಗದೇ ಇದ್ದ ಪಕ್ಷದಲ್ಲಿ ಸಾವಿರಾರು ದೇವರ ಎತ್ತುಗಳು ಆಹಾರವಿಲ್ಲದೆ ನಿತ್ರಾಣಗೊಂಡು ಸಾವಿನತ್ತ ಮುಖ ಮಾಡುತ್ತಿದ್ದವು. ಆದರೆ, ಸ್ವಾಮೀಜಿಯವರ ದೂರದೃಷ್ಟಿಯಿಂದ ಇಂದು ಜಾನುವಾರುಗಳು ಸಮರ್ಪಕವಾಗಿ ಮೇವು ಪಡೆಯುತ್ತಿವೆ ಎಂದರು.

ಸಿ.ಪಿ.ಮಹೇಶ್,ಸಿದ್ದೇಶ್,ಕಿಲಾರಿಗಳಾದಓಬಣ್ಣ, ಮಂಜಣ್ಣ, ಗಾದ್ರಿಪಾಲಯ್ಯ, ಸಣ್ಣಬೋರಯ್ಯ ಮುಂತಾದವರು ಉಪಸ್ಥಿತರಿದ್ದರು.

## ಕಸವಿಗೊಂಡನಹಳ್ಳಿ ಬ್ರಿಡ್ಜ್ ಕಂ ಬ್ಯಾರೇಜ್‌ನಲ್ಲಿ ತುಂಬಿ ಹರಿದ ನೀರು

### ಶ್ರೀರಾಮುಲು ಕಾರ್ಯ ಶ್ಲಾಘಿಸಿದ ಜನತೆ



» ಚಳ್ಳಕೆರೆ

ತಾಲ್ಲೂಕಿನ ಗಡಿಭಾಗವಾದ ಮೊಳಕಾಲ್ಮೂರು ವಿಧಾನಸಭಾ ವ್ಯಾಪ್ತಿಯ ಮೈಲನಹಳ್ಳಿ ಸಮೀಪದ ಕಸವಿಗೊಂಡನಹಳ್ಳಿ ಬಳಿ ಕಳೆದ 2020ರಲ್ಲಿ ಅಂದು ಕ್ಷೇತ್ರದ ಶಾಸಕರು, ಜಿಲ್ಲಾ ಉಸ್ತುವಾರಿಯಾಗಿದ್ದ ಬಿ.ಶ್ರೀರಾಮುಲು ಕಸವಿಗೊಂಡನಹಳ್ಳಿಯ ಬ್ರಿಡ್ಜ್ ಕಂ ಬ್ಯಾರೇಜ್‌ಗೆ ಭೂಮಿ ಪೂಜೆ ನೆರವೇರಿಸಿ ಈ ಕಾಮಗಾರಿ ಶೀಘ್ರದಲ್ಲೇ ಮುಕ್ತಾಯಗೊಂಡು ಸಾರ್ವಜನಿಕರಿಗೆ ಅನುಕೂಲವಾಗಲಿದೆ ಎಂದು ತಿಳಿಸಿದ್ದರು.

ಆದರೆ, 2018ರಲ್ಲಿ ನಿರ್ಮಿಸಿದ ಕಸವಿಗೊಂಡನಹಳ್ಳಿ ಬ್ರಿಡ್ಜ್ ಕಂ ಬ್ಯಾರೇಜ್ ಕಾಮಗಾರಿ ಸಂಪೂರ್ಣ ಮುಕ್ತಾಯಗೊಂಡು ಇತ್ತೀಚೆಗೆ ವಾಣಿವಿಲಾಸ ಸಾಗರದ ನೀರು ವೇದಾವತಿ ನದಿಗೆ ಹರಿಬಿಟ್ಟ ಪರಿಣಾಮವಾಗಿ ಕಸವಿಗೊಂಡನಹಳ್ಳಿ ಬ್ಯಾರೇಜ್ ಪ್ರಥಮಬಾರಿಗೆ ಮೈದುಂಬಿ ಹರಿದಿದ್ದು, ಬ್ರಿಡ್ಜ್ ಬ್ಯಾರೇಜ್ ನಿರ್ಮಿಸಿದ ಮಾಜಿ ಸಚಿವ ಶ್ರೀರಾಮುಲುರವರಿಗೆ ಗ್ರಾಮದ ಪರವಾಗಿ ಮೈಲನಹಳ್ಳಿ ದಿನೇಶ್ ಹಾಗೂ ಇನ್ನಿತರರು ತಿಳಿಸಿದ್ದಾರೆ.

ಕಳೆದ ಹಲವಾರು ದಶಕಗಳಿಂದ ಮೈಲನಹಳ್ಳಿ, ಕಸವಿಗೊಂಡನಹಳ್ಳಿ ಸಂಪರ್ಕಕ್ಕೆ ಯಾವುದೇ ನೇರ ರಸ್ತೆಗಳಿರಲಿಲ್ಲ. ವೇದಾವತಿ ನದಿ ಮಾತ್ರ ಇದ್ದು ಇದರಿಂದ ಎರಡೂ ಗ್ರಾಮದ ಜನರು ತಮ್ಮ ಗ್ರಾಮಗಳಿಗೆ ಕೆಲವು ಕಿ.ಮಿ ದೂರದಿಂದ ಓಡಾಡಬೇಕಿತ್ತು. ಬ್ಯಾರೇಜ್ ನಿರ್ಮಾಣದಿಂದ ಎರಡೂ ಗ್ರಾಮಕ್ಕೆ ರಸ್ತೆ ಸಂಪರ್ಕ ದೊರಕಿದ್ದು, ಈ ಭಾಗದ ಜನರ ದಶಕಗಳ ಕನಸು ನನಸಾಗಿದೆ ಎಂದು ಗ್ರಾಮಸ್ಥರು ಸಂತಸ ಪಟ್ಟರು.

## ಪ್ರಮುಖ ಸುದ್ದಿ

# ಚಿತ್ರದುರ್ಗ ಲೋಕಸಭಾ: ಶೇ.73.30 ರಷ್ಟು ಮತದಾನ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಚುನಾವಣೆಗೆ ಏ.26ರಂದುಶುಕ್ರವಾರಜರುಗಿದಮತದಾನ ಶಾಂತಿಯುತವಾಗಿ ಮುಕ್ತಾಯವಾಗಿದೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಶೇ.73.30 ರಷ್ಟು ಮತದಾನವಾಗಿದೆ. ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಒಟ್ಟು 18,56,876 ಮತದಾರರಲ್ಲಿ 13,61,031 ಮತದಾರರು ಮತಗಟ್ಟೆಯಲ್ಲಿ ಮತ ಚಲಾಯಿಸಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಮಾಹಿತಿ ನೀಡಿದ್ದಾರೆ.

ಲೋಕಸಭಾ ಕ್ಷೇತ್ರ ವ್ಯಾಪ್ತಿಯ 8 ವಿಧಾನಸಭಾ ಕ್ಷೇತ್ರಗಳ ಪೈಕಿ ಮೊಳಕಾಲ್ಮುರು ವಿಧಾನಸಭಾ ಕ್ಷೇತ್ರದಲ್ಲಿ ಅತಿ ಹೆಚ್ಚು ಮತ ಚಲಾವಣೆಯಾಗಿದೆ. ಶೇ.75.75 ರಷ್ಟು ಮತದಾನವಾಗಿದೆ. ಮೊಳಕಾಲ್ಮುರು ವಿಧಾನಸಭಾ ಕ್ಷೇತ್ರದಲ್ಲಿ 125730 ಪುರುಷ, 124968 ಮಹಿಳೆ, 13 ಇತರೆ ಮತದಾರರು ಸೇರಿ ಒಟ್ಟು 250711 ಮತದಾರರು ಇದ್ದಾರೆ. ಇದರಲ್ಲಿ 96329 ಪುರುಷ, 93569 ಮಹಿಳೆ, 7 ಇತರೆ ಮತದಾರರು ಸೇರಿ 189905 ಮತದಾರರು ಮತ ಚಲಾಯಿಸಿದ್ದಾರೆ.



ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಶೇ.72.72 ರಷ್ಟು ಮತದಾನವಾಗಿದೆ. ಕ್ಷೇತ್ರದಲ್ಲಿ 111280 ಪುರುಷ, 113160 ಮಹಿಳೆ ಹಾಗೂ 7 ಇತರೆ ಸೇರಿ ಒಟ್ಟು 224447 ಮತದಾರರು ಇದ್ದಾರೆ. ಇದರಲ್ಲಿ 81990 ಪುರುಷ, 81225 ಮಹಿಳೆ ಹಾಗೂ 1 ಇತರೆ ಸೇರಿ 163216 ಮತದಾರರು ಮತಚಲಾಯಿಸಿದ್ದಾರೆ.

ಚಿತ್ರದುರ್ಗ ವಿಧಾನಸಭಾ ಕ್ಷೇತ್ರದಲ್ಲಿ ಶೇ.70.69 ರಷ್ಟು ಮತದಾನವಾಗಿದೆ. ಕ್ಷೇತ್ರದಲ್ಲಿ 131358 ಪುರುಷ, 136415 ಮಹಿಳೆ ಹಾಗೂ 41 ಇತರೆ ಸೇರಿ ಒಟ್ಟು 267814 ಮತದಾರರು ಇದ್ದಾರೆ. ಇದರಲ್ಲಿ 94999 ಪುರುಷ, 94302 ಮಹಿಳೆ



ಹಾಗೂ 20 ಇತರೆ ಸೇರಿ ಒಟ್ಟು 189321 ಮತದಾರರು ಮತಚಲಾಯಿಸಿದ್ದಾರೆ.

ಹಿರಿಯೂರು ವಿಧಾನಸಭಾ ಕ್ಷೇತ್ರದಲ್ಲಿ ಶೇ.71.53 ರಷ್ಟು ಮತದಾನವಾಗಿದೆ. ಕ್ಷೇತ್ರದಲ್ಲಿ 122532 ಪುರುಷ, 125406 ಮಹಿಳೆ ಹಾಗೂ 16 ಇತರೆ ಸೇರಿ ಒಟ್ಟು 247954 ಮತದಾರರು ಇದ್ದಾರೆ. ಇದರಲ್ಲಿ 88988 ಪುರುಷ, 88354 ಮಹಿಳೆ ಹಾಗೂ 8 ಇತರೆ ಸೇರಿ ಒಟ್ಟು 177350 ಮತದಾರರು ಮತಚಲಾಯಿಸಿದ್ದಾರೆ.

ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಶೇ.75.45 ರಷ್ಟು ಮತದಾನವಾಗಿದೆ. ಕ್ಷೇತ್ರದಲ್ಲಿ 118806 ಪುರುಷ, 119554 ಮಹಿಳೆ ಹಾಗೂ 10 ಇತರೆ ಸೇರಿ ಒಟ್ಟು 238370 ಮತದಾರರು ಇದ್ದಾರೆ. ಇದರಲ್ಲಿ 92421 ಪುರುಷ, 87421 ಮಹಿಳೆ ಹಾಗೂ 2 ಇತರೆ ಮತದಾರರು ಸೇರಿ ಒಟ್ಟು179844 ಮತದಾರರು ಮತಚಲಾಯಿಸಿದ್ದಾರೆ.

ಹೊಸದುರ್ಗ ವಿಧಾನಸಭಾ ಕ್ಷೇತ್ರದಲ್ಲಿ ಶೇ.74 ರಷ್ಟು ಮತದಾನವಾಗಿದೆ. ಕ್ಷೇತ್ರದಲ್ಲಿ 100439 ಪುರುಷ, 100418 ಮಹಿಳೆ ಸೇರಿ ಒಟ್ಟು 200857 ಮತದಾರರು ಇದ್ದಾರೆ. ಇದರಲ್ಲಿ 75388 ಪುರುಷ, 73256 ಮಹಿಳೆ ಮತದಾರರು ಸೇರಿ ಒಟ್ಟು 148644 ಮತದಾರರು ಮತಚಲಾಯಿಸಿದ್ದಾರೆ.

ಪಾವಗಡ ವಿಧಾನಸಭಾ ಕ್ಷೇತ್ರದಲ್ಲಿ ಶೇ.70.52 ರಷ್ಟು ಮತದಾನವಾಗಿದೆ. ಕ್ಷೇತ್ರದಲ್ಲಿ 100873 ಪುರುಷ, 97358 ಮಹಿಳೆ ಹಾಗೂ 9 ಇತರೆ ಸೇರಿ ಒಟ್ಟು 198240 ಮತದಾರರು ಇದ್ದಾರೆ. ಇದರಲ್ಲಿ 70997 ಪುರುಷ, 68801 ಮಹಿಳಾ ಮತದಾರರು ಸೇರಿ ಒಟ್ಟು 139798 ಮತದಾರರು ಮತಚಲಾಯಿಸಿದ್ದಾರೆ.

ಶಿರಾ ವಿಧಾನಸಭಾ ಕ್ಷೇತ್ರದಲ್ಲಿ ಶೇ.75.70 ರಷ್ಟು ಮತದಾನವಾಗಿದೆ. ಕ್ಷೇತ್ರದಲ್ಲಿ 114525 ಪುರುಷ, 113950 ಮಹಿಳೆ ಹಾಗೂ 8 ಇತರೆ ಸೇರಿ ಒಟ್ಟು 228483 ಮತದಾರರು ಇದ್ದಾರೆ. ಇದರಲ್ಲಿ 87384 ಪುರುಷ, 85568 ಮಹಿಳೆ ಹಾಗೂ 1 ಇತರೆ ಮತದಾರರು ಸೇರಿ ಒಟ್ಟು 172953 ಮತದಾರರು ಮತಚಲಾಯಿಸಿದ್ದಾರೆ.

**ಜೂನ್ 04ರಂದು ಮತ ಎಣಿಕೆ:** ಚಿತ್ರದುರ್ಗ ನಗರದ ಸರ್ಕಾರಿ ವಿಜ್ಞಾನ ಕಾಲೇಜಿನ ಹೊಸ ಕಟ್ಟಡದಲ್ಲಿ ಲೋಕಸಭಾ ಕ್ಷೇತ್ರ ವ್ಯಾಪ್ತಿಯ 8 ವಿಧಾನಸಭಾ ಕ್ಷೇತ್ರಗಳ ಮತಯಂತ್ರಗಳನ್ನು ಭದ್ರ ಪಡಿಸಲಾಗಿದ್ದು, ಜೂನ್ 04 ರಂದು ಮತ ಎಣಿಕೆ ಕಾರ್ಯ ನಡೆಯಲಿದೆ.

## ಫಾಸ್ಟ್ ನ್ಯೂಸ್

### ಚಳ್ಳಕೆರೆ ಕ್ಷೇತ್ರದಲ್ಲಿ ಶೇ.72.72 ಮತದಾನ

» **ಚಳ್ಳಕೆರೆ**

ಚಿತ್ರದುರ್ಗ ಲೋಕಸಭಾ ಚುನಾವಣೆಯ ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಏ.26ರಂದು ನಡೆದ ಮತದಾನ ಪ್ರಕ್ರಿಯೆ ಶಾಂತಿಯುತವಾಗಿ ನಡೆದು ಶೇ.72.72 ಮತದಾನವಾಗಿದೆ ಎಂದು ಸಹಾಯಕ ಚುನಾವಣಾಧಿಕಾರಿ ಬಿ.ಆನಂದ್ ತಿಳಿಸಿದರು. ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 224447 ಮತದಾರರಲ್ಲಿ 163216 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ. ಈ ಪೈಕಿ 81990 ಪುರುಷ ಮತದಾರರು, 81225 ಮಹಿಳಾ ಮತದಾರರು, ಓರ್ವ ತೃತೀಯ ಲಿಂಗಿ ಸೇರಿ 163216 ಮತಗಳು ಚಲಾವಣೆಯಾಗಿವೆ ಎಂದರು. ಅತಿಹೆಚ್ಚು ಮತದಾನ ಮತಗಟ್ಟೆ ಸಂಖ್ಯೆ 154 ನಗರಂಗೆರೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದಿದ್ದು, ಶೇ. 88ರಷ್ಟು ಮತದಾನವಾಗಿದೆ. ಸದರಿ ಮತಗಟ್ಟೆಯಲ್ಲಿ 1058 ಮತದಾರರಿದ್ದು, 931 ಮತದಾರರು ಮತ ಚಲಾವಣೆ ಮಾಡಿದ್ದು, ಶೇ.88ರಷ್ಟು ಮತದಾನವಾಗಿ ಇದು ಈ ಕ್ಷೇತ್ರದ ಅತ್ಯುತ್ತಮ ಮತಚಲಾವಣೆಯಾದ ಕೇಂದ್ರವಾಗಿದೆ. ನಗರದ ಬಾಪೂಜಿ ಪಿಯು ಕಾಲೇಜು ಆವರಣದ ಮತಗಟ್ಟೆ ಸಂಖ್ಯೆ 96ರಲ್ಲಿ 1284 ಮತದಾರರಿದ್ದು, ಆಪೈಕಿ 582 ಮತದಾರರು ಮಾತ್ರ ಮತಚಲಾವಣೆ ಮಾಡಿ ಶೇ.45.39 ಫಲಿತಾಂಶ ದಾಖಲಿಸಿ ಇದು ಅತಿಕಡಿಮೆ ಮತದಾನ ಕೇಂದ್ರವಾಗಿದೆ.

### 28 ರಂದು ನಮ್ಮ ನಡೆ, ಮತಗಟ್ಟೆ ಕಡೆ

» **ದಾವಣಗೆರೆ**

ಸಾರ್ವತ್ರಿಕ ಲೋಕಸಭಾ ಚುನಾವಣೆ ಪ್ರಯುಕ್ತ ಏಪ್ರಿಲ್ 28 ರಂದು ಬೆಳಿಗ್ಗೆ 8 ಗಂಟೆಗೆ ನಮ್ಮ ನಡೆ, ಮತಗಟ್ಟೆ ಕಡೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದ್ದು, ಈ ಕಾರ್ಯಕ್ರಮವು ಗುಂಡಿ ಸರ್ಕಲ್‌ನಿಂದ ಪ್ರಾರಂಭವಾಗಿ ಜಿಲ್ಲಾ ಕ್ರೀಡಾಂಗಣದವರೆಗೆ ಬಂದು ನಂತರ ಧ್ವಜರೋಹಣ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ ಬಿ.ಇಟ್ನಾಳ್ ತಿಳಿಸಿದ್ದಾರೆ.

### ಸಾಣೇಹಳ್ಳಿಯಲ್ಲಿ ಇಂದು ಶ್ರೀ ಶಿವಕುಮಾರ ಸ್ವಾಮೀಜಿ ರಥೋತ್ಸವ

» **ಹೊಸದುರ್ಗ**

ಹೊಸದುರ್ಗ ತಾಲೂಕಿನ ಸಾಣೇಹಳ್ಳಿಯಲ್ಲಿ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳ ಸಾನ್ನಿಧ್ಯದಲ್ಲಿ ಶ್ರೀ ಶಿವಕುಮಾರ ಸ್ವಾಮೀಜಿ ರಥೋತ್ಸವ ಸಮಿತಿಯವರು ಪ್ರತಿವರ್ಷದಂತೆ ಏ.28ರಂದು ಸಿರಿಗೆರೆ ತರಳಬಾಳು ಜಗದ್ಗುರು ಬೃಹನ್ಮಠದ ಹಿರಿಯ ಗುರುಗಳಾದ ಶ್ರೀ ಶಿವಕುಮಾರ ಸ್ವಾಮೀಜಿ ರಥೋತ್ಸವ ಆಯೋಜಿಸಿದ್ದಾರೆ. ಸಾಣೇಹಳ್ಳಿ ಪುಟ್ಟ ಗ್ರಾಮವಾದರೂ ಇಲ್ಲಿ ವರ್ಷದುದ್ದಕ್ಕೂ ಸಾಹಿತ್ಯ, ಸಂಗೀತ, ಕಲೆ, ಕೃಷಿ, ಧರ್ಮಕ್ಕೆ ಸಂಬಂಧಿಸಿದ ಚಟುವಟಿಕೆಗಳು ನಡೆಯುತ್ತಿರುತ್ತವೆ. ಸಾಣೇಹಳ್ಳಿಗೆ ಒಂದು ಘನತೆ ಬರುವಂತೆ ಮಾಡಿದವರು ಶ್ರೀ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳವರು. ಅವರು 1977ರಲ್ಲಿ ಸಾಣೇಹಳ್ಳಿ ಮಠಕ್ಕೆ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳನ್ನು ಪಟ್ಟಾಧ್ಯಕ್ಷರನ್ನಾಗಿ ಮಾಡಿದರು. ಕುಗ್ರಾಮವಾಗಿ, ಅನಾಮಧೇಯ ಹಳ್ಳಿಯಾಗಿದ್ದ ಸಾಣೇಹಳ್ಳಿ ಅಂದಿನಿಂದಲೇ ಚೈತನ್ಯ ಪಡೆದುಕೊಂಡು ಸಾಂಸ್ಕೃತಿಕ ಹಳ್ಳಿಯಾಗಿ ಹೆಸರುವಾಸಿಯಾಗಿದೆ. ತಮ್ಮ ಬದುಕಿಗೆ ಬೆಳಕು ನೀಡಿದ ಗುರುವಿನ ಹೆಸರಿನಲ್ಲಿ ರಥೋತ್ಸವ ಮಾಡಬೇಕು ಎನ್ನುವ ಆಶಯವನ್ನು ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳವರು ಗ್ರಾಮಸ್ಥರೆದುರು ವ್ಯಕ್ತಪಡಿಸಿದರು. ರೋಗಿ ಬಯಸಿದ್ದು ಹಾಲು ಅನ್ನ, ವೈದ್ಯ ಹೇಳಿದ್ದೂ ಹಾಲು ಅನ್ನ ಎನ್ನುವಂತಾಯ್ತು. ಅವರ ಆಶಯವನ್ನ ಗ್ರಾಮಸ್ಥರು ನೆರವೇರಿಸಿದರು.

# ಮೋದಿಜೀ ಅಂತಹ ನಾಯಕ ಸಿಗೋದಿಲ್ಲ

## ಕಾಂಗ್ರೆಸ್ಸಿಗರದ್ದು ಎಡಪಂಥೀಯ ಮನಸ್ಥಿತಿ –ಹೊನ್ನಾಳಿ ತಾಲೂಕಿನಲ್ಲಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ

» **ಹೊನ್ನಾಳಿ**

ರಾಜಕೀಯ, ಶೈಕ್ಷಣಿಕ, ಆಧ್ಯಾತ್ಮಿಕ, ಧಾರ್ಮಿಕವಾಗಿ ಎಲ್ಲ ದೃಷ್ಟಿಯಿಂದಲೂ ಪರಿಪೂರ್ಣತೆ ಹೊಂದಿರುವ ನರೇಂದ್ರ ಮೋದಿ ಜೀ ಅಂತಹ ಇನ್ನೊಬ್ಬ ನಾಯಕ 100 ವರ್ಷ ಕಳೆದರೂ ಈ ದೇಶಕ್ಕೆ ಸಿಗುವುದಿಲ್ಲ. ಎಲ್ಲರೂ ಮೆಚ್ಚುವಂತಹ, ಸೋಜಿಗ ಪಡುವಂತಹ ವ್ಯಕ್ತಿತ್ವ ಮೋದಿ ಜೀ ಅವರದ್ದು ಎಂದು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಸಿದ್ದೇಶ್ವರ್ ಅಭಿಪ್ರಾಯಪಟ್ಟರು.

ಹೊನ್ನಾಳಿ ವಿಧಾನಸಭಾ ಕ್ಷೇತ್ರದ ಅರಕೆರೆ, ಹಿರೇಗೋಣಿಗೆರೆ, ಬೇಲಿಮಲ್ಲೂರು ಗ್ರಾಮಗಳಲ್ಲಿ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ನೇತೃತ್ವದಲ್ಲಿ ಮತಯಾಚಿಸಿ ಮಾತನಾಡಿದ ಅವರು, ಮೋದಿ ಜೀ ಅಂತಹ ನಾಯಕ ಬೇರೆ ದೇಶದಲ್ಲಿ ಜನಿಸಿದ್ದರೆ ದೇಶದ ಜನರೆಲ್ಲರೂ ಅವರನ್ನು ಪೂಜಿಸುತ್ತಿದ್ದರು. ಇಂತಹ ಮೇರು ವ್ಯಕ್ತಿತ್ವದ ಮೋದಿ ಜೀ ಅವರನ್ನು ವಿರೋಧಿಸುವಂತಹ ಮಾನಸಿಕ ಸ್ಥಿತಿ ಕೆಲವರಲ್ಲಿದೆ. ಇಂತಹ ಮನಸ್ಥಿತಿ ಇರುವ ಕಾಂಗ್ರೆಸ್ ಪಕ್ಷದಿಂದ ದೇಶಕ್ಕೆ ಯಾವ ಲಾಭವಿದೆ ಎಂದು ಪ್ರಶ್ನಿಸಿದರು.

ಮೋದಿ ಜೀ ಕೇವಲ ವ್ಯಕ್ತಿಯಲ್ಲ, ಅವರೊಂದು ಶಕ್ತಿ. 23 ವರ್ಷಗಳ ಕಾಲ ಗುಜರಾತ್ ಮುಖ್ಯಮಂತ್ರಿಯಾಗಿ, ದೇಶದ ಪ್ರಧಾನಿಯಾಗಿ ಅವರ ರಾಜಕೀಯ ಜೀವನದಲ್ಲಿ ಒಂದು ದಿನವೂ ರಜೆ ತೆಗೆದುಕೊಳ್ಳದೆ 16 ರಿಂದ 18 ತಾಸು ಈ ದೇಶದ ಸರ್ವರ ಒಳಿತಿಗಾಗಿ ಕೆಲಸ ಮಾಡುತ್ತಿದ್ದಾರೆ. ಅಂತಹ ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಿ ಮಾಡುವ ಜವಾಬ್ದಾರಿ ನಮ್ಮ ಮೇಲಿದೆ. ನೀವು ಕಮಲದ ಗುರುತಿಗೆ ಮತ ಹಾಕಿ ನನ್ನು ಇಲ್ಲಿ ಗೆಲ್ಲಿಸಿದರೆ ಅಲ್ಲಿ ಮೋದಿ ಅವರು ಗೆದ್ದು ಪ್ರಧಾನಿ ಆಗುತ್ತಾರೆ. ಇಂತಹ ಅವಕಾಶವನ್ನು ನೀವ್ಯಾರು ಬಿಡಬಾರದು ಎಂದು ಮನವಿ ಮಾಡಿದರು.



> ಕಾಂಗ್ರೆಸ್ ಸರ್ಕಾರ 60 ವರ್ಷಗಳ ಕಾಲ ಜನರ ಕೈಗೆ ಚೊಂಬು ಬಯಲು ಶೌಚಾಲಯಕ್ಕೆ ಪ್ರೋತ್ಸಾಹ ಕೊಟ್ಟಿತ್ತು. ಮೋದಿ ಜೀ ನೇತೃತ್ವದ ಸರ್ಕಾರ ಕೇವಲ 5 ವರ್ಷಗಳಲ್ಲಿ ಸ್ವಚ್ಛಭಾರತ್ ಮಿಷನ್ ಯೋಜನೆ ಅಡಿ ಬಯಲು ಶೌಚಾಲಯ ಮುಕ್ತ ದೇಶವನ್ನಾಗಿ ಮಾಡಿ, ಮಹಿಳೆಯರ, ಪುರುಷರ ಗೌರವ ಉಳಿಸಲು ಶೌಚಾಲಯ ನಿರ್ಮಾಣ ಮಾಡಿಕೊಟ್ಟಿದೆ. ದಾವಣಗೆರೆ ಜಿಲ್ಲೆ ಒಂದರಲ್ಲೇ 1.71 ಲಕ್ಷ ಶೌಚಾಲಯ ಕಟ್ಟಿಸಿಕೊಟ್ಟಿದ್ದಾರೆ. ಹೀಗಿದ್ದರೂ ಕಾಂಗ್ರೆಸ್ನವರು ಈಗಲೂ ಬೀದಿ ಬೀದಿಗಳಲ್ಲಿ ಚೊಂಬು ಹಿಡಿದುಕೊಂಡು ಓಡಾಡುತ್ತಿದ್ದಾರೆ.
>
> ▪ **ಗಾಯಿತ್ರಿ ಸಿದ್ದೇಶ್ವರ, ಬಿಜೆಪಿ ಅಭ್ಯರ್ಥಿ**

ಅರ್ಬನ್ ನಕ್ಸಲ್ ಮನಸ್ಥಿತಿ : ಕಾಂಗ್ರೆಸ್ನವರದ್ದು ಅರ್ಬನ್ ನಕ್ಸಲ್ ಮನಸ್ಥಿತಿ. ಈ ದೇಶದ ಸಂಪತ್ತಿನ ಹೆಚ್ಚಿನ ಪಾಲು ಮುಸ್ಲಿಮರಿಗೆ ಸಿಗಬೇಕು ಎನ್ನುವ ಮನಸ್ಥಿತಿ ಅವರದ್ದು. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ದೇಶದಲ್ಲಿ ಆರ್ಥಿಕ ಸರ್ವೆ ಮಾಡುವುದಾಗಿ ಹೇಳುತ್ತಿದ್ದಾರೆ. ಕಷ್ಟಪಟ್ಟು ನೀವು ದುಡಿದ ಆಸ್ತಿ ಕಂಡವರ ಪಾಲಾಗಲು ಯಾವುದೇ ಕಾರಣಕ್ಕೂ ಬಿಡಬೇಡಿ. ಆರ್ಥಿಕ ಸಮೀಕ್ಷೆ ನಡೆಸುತ್ತೇವೆ ಎನ್ನುವವರನ್ನು ಮನೆಗೆ ಕಳುಹಿಸಲು ಸಿದ್ಧರಾಗಿ.

ಕಾಂಗ್ರೆಸ್ ಅಭಿವೃದ್ಧಿಯ ಬಗ್ಗೆ ಎಲ್ಲಿಯೂ ಮಾತನಾಡುತ್ತಿಲ್ಲ. ಅದರ ಬದಲಾಗಿ ಜಾತಿ ಜಾತಿಗಳ ಮಧ್ಯೆ ವಿಷ ಬೀಜ ಬಿತ್ತುವ ಕೆಸಲ ಮಾಡುತ್ತಿದ್ದಾರೆ. 60 ವರ್ಷಗಳ ಕಾಲ ಈ ದೇಶದ ಜನರ ಹಣ ಲೂಟಿ ಮಾಡಿದ ಕಾಂಗ್ರೆಸ್ ಈಗ ನಿಮ್ಮ ಮರಣದ ನಂತರ ನಿಮ್ಮ ಆಸ್ತಿಯಲ್ಲಿ ಶೇ.55 ರಷ್ಟು ಪಾಲು ಸರ್ಕಾರಕ್ಕೆ, 45 ರಷ್ಟು ಪಾಲು ಆಸ್ತಿಯ ಒಡೆಯರ ವಾರಸುದಾರರಿಗೆ ಎನ್ನುವ ಬಗ್ಗೆ ಚಿಂತನೆ ನಡೆಸುತ್ತಿದೆ. ಇದು ಈ ದೇಶದ ಜನರಿಗೆ ಮಾಡುತ್ತಿರುವ ಮಹಾ ಮೋಸವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿಸಚಿವಎಂ.ಪಿ.ರೇಣುಕಾಚಾರ್ಯ ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಸಿದ್ದೇಶ್ವರ್ ಪರ ಮತಯಾಚಿಸಿ ಮಾತನಾಡಿ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಅವರ ಬ್ರದರ್ಸ್‌ಗಳ ಗೂಂಡಾ ವರ್ತನೆ, ಭಯೋತ್ಪಾದನೆ ಹೆಚ್ಚಾಗುತ್ತದೆ ಎನ್ನುವುದಕ್ಕೆ ಅನೇಕ ಸಾಕ್ಷಿಗಳಿವೆ ಎಂದರು. ಮೊನ್ನೆ ಹುಬ್ಬಳ್ಳಿಯಲ್ಲಿ ನಡೆದ ವಿದ್ಯಾರ್ಥಿನಿ ನೇಹಾ ಹತ್ಯೆ, ಪಕ್ಕದ ಚನ್ನಗಿರಿ ತಾಲೂಕಿನ ನಲ್ಲೂರು ಗ್ರಾಮದಲ್ಲಿ ಜೈ ಶ್ರೀರಾಮ್ ಎಂದಿದ್ದಕ್ಕೆ ದಲಿತ ಯುವಕರ ಮೇಲೆ ಹಲ್ಲೆ, ಮಂಡ್ಯದಲ್ಲಿ ಹನುಮಾನ್ ಧ್ವಜ ಇಳಿಸಿದ್ದು, ಬೆಂಗಳೂರಿನಲ್ಲಿ ಜೈಶ್ರೀರಾಮ್ ಎಂದಿದ್ದಕ್ಕೆ ಇಬ್ಬರು ಯುವಕರ ಮೇಲೆ ಹಲ್ಲೆ ಮಾಡಿರುವುದು, ಮೋದಿ ಬಗ್ಗೆ ಹಾಡು ಬರೆದಿದ್ದಕ್ಕೆ ಹಿಂದೂ ಯುವಕನ ಮೇಲೆ ಮಾಡಿರುವುದು. ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಇಟ್ಟಿದ್ದು.. ಒಂದಾ, ಎರಡಾ ಪಟ್ಟಿ ಮಾಡುತ್ತಾ ಹೋದರೆ ಇಡೀ ದಿನ ಸಾಕಾಗುವುದಿಲ್ಲ. ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಇಟ್ಟಿದ್ದು ನಮ್ಮ ಪಕ್ಕದ ಜಿಲ್ಲೆಯ ಕಾಂಗ್ರೆಸ್ ಬ್ರದರ್. ಅವರನ್ನು ಬಂದಿಸಿದ್ದು, ಎನ್‌ಐಎ ತಂಡ. ಇಂಹವರಿಗೆ ಅಧಿಕಾರ ಕೊಡಬೇಕಾ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮೋದಿ ಜೀ ಪ್ರಧಾನಿಯಾದ ಮೇಲೆ ದೇಶದಲ್ಲಿಭಯೋತ್ಪಾದನೆಮಟ್ಟಹಾಕಿದ್ದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮತ್ತೆ ಜೀಹಾದಿಗಳು ತಲೆ ಎತ್ತುತ್ತಿದ್ದಾರೆ. ಅಂತಹವರು ತಲೆ ಎತ್ತ ಬಾರದು ಎಂದರೆ ನಾವು–ನೀವು ಮೋದಿ ಅವರನ್ನು ಮತ್ತೆ ಪ್ರಧಾನಿ ಮಾಡಬೇಕು. ಅವರು ಪ್ರಧಾನಿ ಆಗಬೇಕು ಎಂದರೆ ಇಲ್ಲಿ ಗಾಯಿತ್ರಿ ಅಕ್ಕ ಹೆಚ್ಚು ಮತಗಳ ಅಂತರದಿಂದ ಗೆದ್ದು ದೆಹಲಿಗೆ ಹೋಗಬೇಕು. ಈ ನಿಟ್ಟಿನಲ್ಲಿ ನಮ್ಮ ಮುಖಂಡರು, ಕಾರ್ಯಕರ್ತರು ಮನೆ ಮನೆಗೂ ತೆರಳಿ ಗಾಯಿತ್ರಿ ಅಕ್ಕನ ಪರ ಮತಯಾಚಿಸಬೇಕು ಎಂದು ಕರೆ ನೀಡಿದರು.

ಮಂಡಲ ಅಧ್ಯಕ್ಷ ಸುರೇಶ್, ಬಿಜೆಪ ಪ್ರಧಾನ ಕಾರ್ಯದರ್ಶಿ ಬಿ.ಎಸ್. ಜಗದೀಶ್, ಬಿಜೆಪಿ ಮುಖಂಡ ಮಹೇಶ್, ಕುಬೇರಪ್ಪ, ಸಂತೋಷ ಕುಮಾರ್, ಎಲ್. ಕೆ ಮಂಜಪ್ಪ, ಪ್ರಭು, ರವಿ, ಹೊನ್ನಪ್ಪ, ರಾಮಣ್ಣ, ಶಾಂತರಾಜ್ ಪಾಟೀಲ್, ಹನುಮಂತಪ್ಪ, ಅರೆಕೆರೆ ನಾಗರಾಜ್, ರಂಗನಾಥ್, ಸುರೇಂದ್ರ, ಯೋಗೇಶ್, ಮಂಡಲದ ಸದಸ್ಯರು, ಗ್ರಾಮ ಪಂಚಾಯಿತಿ ಸದಸ್ಯರು, ಬೂತ್ ಮಟ್ಟದ ಅಧ್ಯಕ್ಷರು, ಗ್ರಾಮದ ಬಿಜೆಪಿ ಮುಖಂಡರು ಸೇರಿದಂತೆ ಹೊನ್ನಾಳಿ ವಿಧಾನ ಸಭಾ ಕ್ಷೇತ್ರದ ಮುಖಂಡರು ಇದ್ದರು.

# ಏಪ್ರಿಲ್ 28ಕ್ಕೆ ದಾವಣಗೆರೆಗೆ ಪ್ರಧಾನ ಮಂತ್ರಿಗಳ ಪ್ರವಾಸ, ಸಂಚಾರಿ ಮಾರ್ಗಗಳಲ್ಲಿ ಭಾರಿ ಬದಲಾವಣೆ

» **ದಾವಣಗೆರೆ**

ಪ್ರಧಾನಮಂತ್ರಿಗಳಾದ ಶ್ರೀ ನರೇಂದ್ರ ಮೋದಿಯವರು ಏಪ್ರಿಲ್ 28 ರಂದು ದಾವಣಗೆರೆ ಆಗಮಿಸಿ ಹೈಸ್ಕೂಲ್ ಮೈದಾನದಲ್ಲಿ ಆಯೋಜಿಸಿರುವ ಚುನಾವಣಾ ರ್ಯಾಲಿಯಲ್ಲಿ ಭಾಗವಹಿಸುತ್ತಿರುವ ಹಿನ್ನೆಲೆಯಲ್ಲಿ ಸುಗಮ ಸಂಚಾರ, ಕಾನೂನು ಸುವ್ಯವಸ್ಥೆ ಕಾಪಾಡಲು ಏಪ್ರಿಲ್ 27, 28 ರಂದು ನಗರದ ವಾಹನ ಸಂಚಾರ ಮಾರ್ಗಗಳಲ್ಲಿ ಭಾರಿ ಬದಲಾವಣೆ ಮಾಡಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ವೆಂಕಟೇಶ್ ಎಂ.ವಿ ಆದೇಶಿಸಿದ್ದಾರೆ.

ಹೈಸ್ಕೂಲ್ ಮೈದಾನದಲ್ಲಿ ದ್ದ ಕೆಎ□□□ರ್ ಟಿಸಿ ಬಸ್ ನಿಲ್ದಾಣ ಹೊಸ ಕೆಎ□□□ರ್ ಟಿಸಿ ಬಸ್ ನಿಲ್ದಾಣಕ್ಕೆ ಸ್ಥಳಾಂತರಿಸಲಾಗಿದೆ. ಮತ್ತು ಖಾಸಗಿ ಬಸ್ ನಿಲ್ದಾಣಕ್ಕೆ ಬರುವ ಬಸ್ ಗಳನ್ನು ಸಂಪೂರ್ಣ ನಿಷೇಧಿಸಲಾಗಿದೆ. ಜಗಳೂರು ಕಡೆಯಿಂದ ಬರುವ ಬಸ್ ಗಳು ಜಗಳೂರು ಬಸ್ ನಿಲ್ದಾಣ, ಹದಡಿ ರಸ್ತೆಯಿಂದ ಬರುವ ಖಾಸಗಿ ಬಸ್ ಮಾಗನೂರು ಬಸಪ್ಪ ಮೈದಾನ, ಚಿತ್ರದುರ್ಗದ ಕಡೆಯಿಂದ ಬರುವ ಬಸ್ ಗಳು ಎಪಿಎಂಸಿ ದನದ ಮಾರುಕಟ್ಟೆಯಲ್ಲಿ ನಿಲುಗಡೆ ಮಾಡಿ ಅಲ್ಲಿಂದಲೇ ನಿಲುಗಡೆ ಮಾಡಬೇಕು.

ವಾಹನ ಸಂಚಾರ ಮಾರ್ಗಗಳ ಬದಲಾವಣೆ. ಹರಿಹರ ಕಡೆಯಿಂದ ಬರುವ ಎಲ್ಲಾ ಕೆಎಸ್ ಆರ್ ಟಿಸಿ ಬಸ್ ಗಳು ಹೆದ್ದಾರಿ ಬೈಪಾಸ್ ಮೂಲಕ ಬಾಡಾ ಕ್ರಾಸ್ ಮೂಲಕ ಹೊಸ ಬಸ್ ನಿಲ್ದಾಣಕ್ಕೆ ಬರುವುದು ಮತ್ತು ಇದೇ ಮಾರ್ಗದಲ್ಲಿ ವಾಪಸ್ ಸಂಚರೀಸಬೇಕು. ಚಿತ್ರದುರ್ಗದಿಂದ ಬರುವ



ಬಸ್ ಗಳು ಬಾಡಾ ಕ್ರಾಸ್ ಮೂಲಕ ಹೊಸ ಬಸ್ ನಿಲ್ದಾಣಕ್ಕೆ ಬಂದು ಅದೇ ಮಾರ್ಗವಾಗಿ ಬಾಡಾ ಕ್ರಾಸ್ ನಿಂದ ಮಾರ್ಗ ಬದಲಿಸಬೇಕು. ಹರಪನಹಳ್ಳಿ, ಬೆಂಡಿಕೆರೆ, ಜಗಳೂರಿನಿಂದ ಬರುವ ಬಸ್ ಗಳು ಬೇತೂರು ರಸ್ತೆ ಹೊಸ ಬಸ್ ನಿಲ್ದಾಣಕ್ಕೆ ಬಂದು ಅಲ್ಲಿಂದ ವಾಪಸ್ ಹೋಗುವುದು. ಕೊಂಡಜ್ಜಿ ಮಾರ್ಗವಾಗಿ ದಾವಣಗೆರೆ ಬರುವ ಬಸ್ ಗಳು ಹರಿಹರ ಮಾರ್ಗವಾಗಿ ಹೆದ್ದಾರಿ ಮೂಲಕ ಬಾಡಾ ಕ್ರಾಸ್ ಮೂಲಕ ಹೊಸ ಬಸ್ ಸ್ಟ್ಯಾಂಡ್ ಗೆ ಬರಬೇಕು. ಆದರೆ ಕೊಂಡಜ್ಜಿ ರಸ್ತೆ, ಶಿಬಾರ ರಸ್ತೆಯಲ್ಲಿ ಓಡಾಡುವ ವಾಹನಗಳು ಆರ್.ಟಿ.ಓ ಸರ್ಕಲ್ ನಿಂದ ಫ್ಲೈಓವರ್ ಮೂಲಕ ಸಂಗೊಳ್ಳಿ ರಾಯಣ್ಣ ಸರ್ಕಲ್ ಗೆ ಬರುವುದನ್ನು ನಿಷೇಧಿಸಿದೆ. ಶಾಮನೂರು ಕ್ರಾಸ್ ನಿಂದ ಶಾರದಾಂಭ ಸರ್ಕಲ್ ವರೆಗೆ ವಾಹನಗಳು ಬರುವುದು, ನಂತರ ಸಂಗೊಳ್ಳಿ ರಾಯಣ್ಣ ಸರ್ಕಲ್ ಗೆ ಬಸ್ ಮತ್ತು ಲಾರಿ ಓಡಾಟ ನಿಷೇಧಿಸಿದೆ. ಹದಡಿ ರಸ್ತೆ ಮಾರ್ಗವಾಗಿ ಬರುವ ವಾಹನಗಳು ಸ್ಟೇಡಿಯಂ ಎಆರ್ ಜಿ ಕಾಲೇಜ್ ಕ್ರಾಸ್ ವರೆಗೆ ಬಂದು ವಾಪಸ್ ಹೋಗುವುದು.

ಹಳೇ ಕೋರ್ಟ್ ರಸ್ತೆಯಲ್ಲಿರುವ ಆಟೋ ನಿಲ್ದಾಣವನ್ನು ಈ ಎರಡು ದಿನ ಬೇರೆ ಕಡೆ ಸ್ಥಳಾಂತರಿಸಿ ಕೊಳ್ಳಬೇಕು. ಇಲ್ಲಿ ಆಟೋ ನಿಲುಗಡೆ ಸ್ಥಗಿತಗೊಳಿಸಿದೆ.

ಈ ಮಾರ್ಗಗಳಲ್ಲಿ ಆಟೋ ಸಂಚಾರ ಸಂಪೂರ್ಣ ಸ್ಥಗಿತ. ಹಳೆ ಪಿಬಿ ರಸ್ತೆಯಲ್ಲಿ ಬಾತಿ ಕೆರೆಯಿಂದ ಎಪಿಎಂಸಿ ಫ್ಲೈ ಓವರ್, ಎವಿಕೆ ರಸ್ತೆ ಪಿ.ಜೆ.ಕ್ರಾಸ್ ನಿಂದ ವಿಜಯಾ ಹೋಟೆಲ್ ಆಟೋ ಸ್ಟ್ಯಾಂಡ್, ಹಳೇ ಕೋರ್ಟ್ ರಸ್ತೆಯ ಎಸಿ ಸರ್ಕಲ್ ನಿಂದ ಅಂಬೇಡ್ಕರ್ ಸರ್ಕಲ್,ವಿದ್ಯಾರ್ಥಿ ಭವನದ ವರೆಗೆ, ಹಳೆ ಐಬಿ ರಸ್ತೆಯ ಅರಸು ಸರ್ಕಲ್ ನಿಂದ ಜಯದೇವ ವೃತ್ತದವರೆಗೆ, ಅಶೋಕ್ ರಸ್ತೆಯಲ್ಲಿ ಗಾಂಧಿ ಸರ್ಕಲ್ ನಿಂದ ಜಯದೇವ ಸರ್ಕಲ್ ವರೆಗೆ, ಅರುಣಾ ಸರ್ಕಲ್ ನಿಂದ ರಾಂ ಅಂಡ್ ಕೋ ಸರ್ಕಲ್–ಸಿಜೆ ಆಸ್ಪತ್ರೆ ರಸ್ತೆ ಸ್ಪಂದನಾ ಜ್ಯೂಸ್ ಸ್ಟಾಲ್–ಸಿಜಿ ಆಸ್ಪತ್ರೆ ರಸ್ತೆ ಬ್ಲಡ್ ಬ್ಯಾಂಕ್ ರಸ್ತೆ ಈ ಮಾರ್ಗಗಳಲ್ಲಿ ಆಟೋ ಸಂಚಾರ ಸಂಪೂರ್ಣ ಸ್ಥಗಿತಗೊಳಿಸಿದೆ. ಈ ಮಾರ್ಗಗಳಲ್ಲಿ ಪರ್ಯಾಯ ಬದಲಿಸಿ. ಬಾತಿ ಕಡೆಯಿಂದ ಗಾಂಧಿ ವೃತ್ತ, ಶಾಮನೂರು, ಲಕ್ಷ್ಮೀ ಫ್ಲೋರ್ ಮಿಲ್,ಗುಂಡಿ ಸರ್ಕಲ್,ವಿದ್ಯಾರ್ಥಿ ಭವನ, ಅಂಬೇಡ್ಕರ್ ಸರ್ಕಲ್,ಜಯದೇವ ಸರ್ಕಲ್, ಗಾಂಧಿ ಸರ್ಕಲ್,ಹಳೆ ಪಿಬಿ ರಸ್ತೆ, ಹಳೆ ಕೋರ್ಟ್ ರಸ್ತೆ, ಎವಿಕೆ ರಸ್ತೆ ಮಾರ್ಗವಾಗಿ ಬಾರದೆ ಇತರೆ ಮಾರ್ಗ ಅನುಸರಿಸಿ. ಹಾವೇರಿ, ಹರಿಹರ ಕಡೆಯಿಂದ ಬರುವ ಲಾರಿ ಮತ್ತು ಇತರೆ ವಾಹನಗಳು ಬಾತಿಯಿಂದ ಹೆದ್ದಾರಿಗೆ ಮಾರ್ಗವಾಗಿ ಮುಂದೆ ಹೋಗಬೇಕು.

# ಯರೇಹಳ್ಳಿ ಮರು ಮತದಾನಕ್ಕೆ ಒತ್ತಾಯಿಸಿ ಪ್ರತಿಭಟನೆ



» **ಚಿತ್ರದುರ್ಗ**

ಮೂಲಭೂತ ಸೌಲಭ್ಯಗಳಿಲ್ಲದೆ ಪರಿತಪಿಸುತ್ತಿರುವ ಯರೇಹಳ್ಳಿ ಗ್ರಾಮಸ್ಥರು ಶುಕ್ರವಾರ ನಡೆದ ಲೋಕಸಭಾ ಚುನಾವಣೆಯಲ್ಲಿ ಮತದಾನ ಬಹಿಷ್ಕರಿಸಿರುವುದರಿಂದ ಮರು ಮತದಾನ ನಡೆಸುವಂತೆ ಕರುನಾಡ ವಿಜಯಸೇನೆ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿ ಎದುರು ಶನಿವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.ವಿದ್ಯುತ್ ಇಲ್ಲದೆ ರಾತ್ರಿ ಕತ್ತಲೆಯಲ್ಲಿ ಕಾಲ ಕಳೆಯುತ್ತಿರುವ ಯರೇಹಳ್ಳಿಯಲ್ಲಿ ರೈತರ ಕೃಷಿಗೆ ವಿದ್ಯುತ್ ತೊಂದರೆಯಾಗಿದೆ. ವಿದ್ಯಾರ್ಥಿಗಳು ರಾತ್ರಿ ವೇಳೆಯಲ್ಲಿ ಓದಲು ಕಷ್ಟಪಡುತ್ತಿದ್ದಾರೆ. ಮೊಬೈಲ್ ನೆಟ್‌ವರ್ಕ್ ಇಲ್ಲದ ಕಾರಣ ತುರ್ತು ಸಂದರ್ಭಗಳಲ್ಲಿ ಅಂಬ್ಯುಲೆನ್ಸ್, ಪೊಲೀಸ್‌ಗೆ ಕರೆ ಮಾಡಲು ಆಗುತ್ತಿಲ್ಲ. ಗುಡ್ಡದ ತುತ್ತ ತುದಿಗೇರಿ ಮೊಬೈಲ್‌ನಲ್ಲಿ ಮಾತನಾಡಬೇಕು. ದೇಶಕ್ಕೆ ಸ್ವಾತಂತ್ರ್ಯ ಸಿಕ್ಕು ಎಪ್ಪತ್ತು ವರ್ಷಗಳಾಗಿದ್ದರೂ ಇನ್ನು ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಯರೇಹಳ್ಳಿ ಗ್ರಾಮಸ್ಥರು ಮತದಾನ ಬಹಿಷ್ಕರಿಸುವ ಮೂಲಕ ತಮ್ಮ ಆಕ್ರೋಶ ವ್ಯಕ್ತಪಡಿಸಿದ್ದಾರೆ. 180 ಕ್ಕೂ ಹೆಚ್ಚು ಮನೆಗಳುಳ್ಳ ಈ ಗ್ರಾಮದಲ್ಲಿ 557 ಮತದಾರರಿದ್ದು, ಕೇವಲ 27 ಜನ ಮಾತ್ರ ಮತದಾನ ಮಾಡಿದ್ದಾರೆ. ಒಂದು ವಾರದೊಳಗಾಗಿ ಮೂಲಭೂತ ಸೌಲಭ್ಯಗಳನ್ನು ಒದಗಿಸದಿದ್ದರೆ ಯರೇಹಳ್ಳಿ ಜಿಲ್ಲಾಧಿಕಾರಿ ಕಚೇರಿವರೆಗೆ ಪಾದಯಾತ್ರೆ ನಡೆಸಲಾಗುವುದೆಂದು ಪ್ರತಿಭಟನೆ ಎಚ್ಚರಿಸಿದರು.

## ಪ್ರಮುಖ ಸುದ್ದಿ

### ಬಿಸಿಲು ಲೆಕ್ಕಿಸಿದೆ ರಥೋತ್ಸವ ನೋಡಲು ಬಂದ ಭಕ್ತಸಾಗರ

# ವಿಜೃಂಭಣೆಯ ಗೂಳಿಹಟ್ಟಿ ಶ್ರೀ ಕರಿಯಮ್ಮ ದೇವಿ ರಥೋತ್ಸವ

» **ಹೊಸದುರ್ಗ**

ಸುತ್ತಲೂ ಕಾಡು,ಕಾಡುಗಳ ಮಧ್ಯೆ ಸುಂದರವಾದ ಗ್ರಾಮ,ಈ ಗ್ರಾಮವನ್ನ ಕಾಯುವ ದೇವತೆಗಳಿಗೆ ವರ್ಷಕ್ಕೆ ಒಂದು ಬಾರಿ ಯುಗಾದಿಯ ಹಬ್ಬವದ ಬಳಿಕ ಎಂಟು ದಿನಗಳ ಕಾಲ ಅದ್ದೂರಿ ಜಾತ್ರಾ ಉತ್ಸವವನ್ನು ಇಲ್ಲಿನ ಗ್ರಾಮಸ್ಥರು ಪರಂಪರೆಯಿಂದಲೂ ನಡೆಸ್ತಾ ಬರ್ತಾ ಇರುವುದು ಇಲ್ಲಿನ ವಾಡಿಕೆ.

ಗೂಳಿಹಟ್ಟಿ ಗ್ರಾಮದಲ್ಲಿನ ಶ್ರೀ ಕರಿಯಮ್ಮ ದೇವಿಯ ರಥೋತ್ಸವವೂ ಶನಿವಾರ ನೂರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು.

ಶ್ರೀ ಕರಿಯಮ್ಮ ದೇವಿಯ ರಥೋತ್ಸವವನ್ನ ಕಣ್ತುಂಬಿಕೊಳ್ಳಲು ಸುತ್ತಮುತ್ತಲಿನ ಗ್ರಾಮದ ಭಕ್ತರು ಬೆಳಿಗ್ಗೆಯಿಂದಲೇ ಜಾತ್ರೆಗಾಗಿ ಬಂದಿದ್ದು, ಮುಂಜಾನೆಯಿಂದಲೇ ಬಿಡುವಿಲ್ಲದಂತೆ ಪೂಜಾ ಕಾರ್ಯಗಳು ನಡೆದವು. ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವಿಯ ದರ್ಶನವನ್ನ ಪಡೆದರು.

ಗ್ರಾಮದ ತೇರಿನ ಮನೆಯ ಬೀದಿಯಲ್ಲಿ ರಥೋತ್ಸವವು ನೆಡೆದಿದ್ದು ಈ ರಥೋತ್ಸವಕ್ಕಾಗಿ ದೇವಿಯ ರಥವನ್ನ ವಿವಿಧ ಹೂಗಳಿಂದ ಅಲಂಕರಿಸಿ. ಬಣ್ಣ ಬಣ್ಣದ ಬಟ್ಟೆಗಳಿಂದ ಶೃಂಗಾರ ಗೊಳಿಸಿ ರಥದ ಸುತ್ತಲೂ ಬಾವುಟಗಳನ್ನು ಕಟ್ಟಿದ್ದು ಗ್ರಾಮಸ್ಥರೇ ಬೆಳೆದಂತಹ ಹೊಂಬಾಳೆಯಿಂದ ಬೃಹತ್ ಹಾರಗಳ ಸಹಾಯದೊಂದಿಗೆ ಅಲಂಕಾರಗೊಳಿಸಲಾಗಿತ್ತು.

ರಥದ ಮೇಲೆ ತಾಯಿ ಕರಿಯಮ್ಮ ಮತ್ತು ಮುತ್ತಿನ ಮುಡಿಯಮ್ಮ ದೇವಿಯವರನ್ನ ಬಂಗಾರದ ಆಭರಣಗಳು ಮತ್ತು ಸುಗಂಧದ ಹೂಗಳಿಂದ ಶೃಂಗಾರ ಗೊಳಿಸಿ ಪ್ರತಿಷ್ಠಾಪಿಸಲಾಗಿತ್ತು. ವಿವಿಧ ಧಾರ್ಮಿಕ ವಾದ್ಯಗಳೊಂದಿಗೆ ಸೋಮಣ್ಣ ಕುಣಿತದ ಆಜ್ಞೆಯ ಮೇರೆಗೆ ರಥವನ್ನ ತೇರಿ ಮನೆಯಿಂದ ದೊಡ್ಡಮ್ಮ ದೇವಿಯ ಸನ್ನಿಧಿಯವರಿಗೆ ಭಕ್ತರು ಎಳೆಯುವುದರ ಮೂಲಕ ಶ್ರೀ ಕರಿಯಮ್ಮ ದೇವಿಯ ರಥೋತ್ಸವವನ್ನು ಅದ್ದೂರಿಯಾಗಿ ಆಚರಿಸಿ ಸಂಭ್ರಮಿಸಿದ್ದಾರೆ.

**ಮುಂಜಾನೆಯಿಂದಲೇ ಧಾರ್ಮಿಕ ಪೂಜೆ ಪುನಸ್ಕಾರಗಳನ್ನು ನೆರವೇರಿಸಿ ರಥಕ್ಕೆ :** ಬಾಳೆಹಣ್ಣು,ರಾಗಿ.ಜೋಳ, ದವಸ ಧಾನ್ಯಗಳು



ಮಂಡಕ್ಕಿ,ಚಿಲ್ಲರೆ ನಾಣ್ಯಗಳನ್ನ ತುರುತ್ತಾ ಹಣ್ಣು ಕಾಯಿ ಹೂವುಗಳನ್ನ ಸಮರ್ಪಿಸಿ ತಮ್ಮ ಇಷ್ಠಾರ್ಥವನ್ನು ಈಡೇರಿಸುವಂತೆ ಭಕ್ತಿ ಪೂರ್ವಕವಾಗಿ ಪ್ರಾರ್ಥಿಸುತ್ತ, ನಾಡಿನ ಸುಭೀಕ್ಷೆ ಹಾಗೂ ಉತ್ತಮ ಮಳೆ ಬೆಳೆಗಾಗಿ ಪ್ರಾರ್ಥಿಸಿದರು.

> ಅಕ್ಕ ತಂಗಿ ಕರಿಯಮ್ಮ ಮತ್ತು ಮುತ್ತಿನ ಮುಡಿಯಮ್ಮನವರ ಕೂಡು ಭೇಟಿ,ಸೋಮಣ್ಣನವರ ಕುಣಿತ ನೋಡಲಿಕ್ಕೆ ಎಂದೇ ಈ ಜಾತ್ರೆಗೆ ಪ್ರತಿ ವರ್ಷ ಬರುತ್ತೇವೆ.ವಾದ್ಯಗಳ ಸದ್ದಿಗೆ ದೇವತೆಗಳ ಹೆಜ್ಜೆ ಹಾಕುವುದನ್ನು ನೋಡುವುದೇ ಒಂದು ಸಂಭ್ರಮ..
>
> » **ಗೂಳಿಹಟ್ಟಿ ಕೃಷ್ಣಮೂರ್ತಿ ಸಮಾಜ ಸೇವಕರು.**

ಶ್ರೀ ಕರಿಯಮ್ಮ ದೇವಿಯ ಜಾತ್ರಾ ಮಹೋತ್ಸವದ ಅಂಗವಾಗಿ ಏಪ್ರಿಲ್ 23ರಿಂದ ಜಾತ್ರೆಗೆ ಚಾಲನೆ ನೀಡಲಾಗಿದ್ದು ಏಪ್ರಿಲ್ 23ರಂದು ಮದುವಣಿಗೆ ಶಾಸ್ತ್ರ,24 ರಂದು ಧ್ವಜಾರೋಹಣ,ಹೊಳೆಪೂಜೆ, ದೊಡ್ಡಭಾನೋತ್ಸವ, ಬೇವಿನ ಸೀರೆ ಮತ್ತು ಶಾಸ್ತ್ರದಂಡ,25 ರಂದು ಧೂಳೋತ್ಸವ,26 ರಂದು ಗಜೋತ್ಸವ, ಭಂಡಾರದ ತಟ್ಟೆ,ಎನ್.ಜಿ ಹಳ್ಳಿಯ ಶ್ರೀ ಮುತ್ತಿನ ಮುಡಿಯಮ್ಮ ದೇವಿಯ ಆಗಮನ ಮತ್ತು ಕೂಡು ಭೇಟಿ ಉತ್ಸವ,27 ರಂದು ಶ್ರೀ ಕರಿಯಮ್ಮ ದೇವಿಯ ರಥೋತ್ಸವವನ್ನು ಅದ್ದೂರಿಯಾಗಿ ಭಕ್ತರ ಸಮ್ಮುಖದಲ್ಲಿ ಸಂಭ್ರಮಿಸಿದ್ದಾರೆ.

ಗ್ರಾಮದ ಸುತ್ತಮುತ್ತಲಿನ ಭಕ್ತರು ಶ್ರೀ ಕರಿಯಮ್ಮ ದೇವಿಯ ದರ್ಶನ ಪಡೆದು ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ವಿವಿಧ ಪೂಜೆ ಪುನಸ್ಕಾರಗಳನ್ನು ಸಲ್ಲಿಸಿ ಹರಕೆ ಎಂಬಂತೆ ಪಾನಕದ ಬಂಡಿ ಕಟ್ಟಿ ಪಾನಕ ಮತ್ತು ಪಲ್ಲಾರವನ್ನು ಕೂಡ ಇದೆ ವೇಳೆ ಹಂಚಿದರು.ಈ ಜಾತ್ರೆಗೆ ಆಗಮಿಸಿದ ಭಕ್ತರಿಗಾಗಿ ಅನ್ನದಾಸೋಹವನ್ನು ಏರ್ಪಡಿಸಿದ್ದು ವಿವಿಧ ಸಿಹಿ ಖಾದ್ಯಗಳನ್ನ ಸ್ವೀಕರಿಸಿ ಸಂತೃಪ್ತರಾಗಿ ತಮ್ಮ ತಮ್ಮ ಮನೆಗಳತ್ತ ಮುಖ ಮಾಡಿದರು.

ಏಪ್ರಿಲ್ 28 ರಂದು ಹೂವಿನ ಉತ್ಸವ ಮತ್ತು ಬೆಲ್ಲದ ರಾಶಿ, 29ರಂದು ಅವಭೃತಸ್ನಾನ ಮತ್ತು ಮಹಾ ಮಂಗಳಾರತಿ, 31 ಗಾವು ಮತ್ತು ಕಂಕಣ ವಿಸರ್ಜನೆ ಕಾರ್ಯಕ್ರಮಗಳು ನಡೆಯುವ ಮೂಲಕ ಜಾತ್ರೆಗೆ ತೆರೆ ಬಿಡುತ್ತದೆ..



# ಅಂಬೇಡ್ಕರ್ ಗಾಂಧಿ

## ಶತ್ರುಗಳೇ–ಮಿತ್ರರೇ....

### ಉದಾಹರಣೆ ಮತ್ತು ಎಚ್ಚರಿಕೆ......



ಭಾರತೀಯ ಸಮಾಜದಲ್ಲಿ ಅಸ್ಪೃಶ್ಯತೆ, ಜಾತಿ ಪದ್ಧತಿಯ ನಿರ್ಮೂಲನೆಯಾಗಿ ಸಮ ಸಮಾಜ ನಿರ್ಮಾಣವಾಗಬೇಕೆಂಬುದು ಎಷ್ಟು ಮುಖ್ಯವೋ, ಸುಮಾರು ನೂರು ವರ್ಷಗಳ ಹಿಂದೆ ಭಾರತದ ಸ್ವಾತಂತ್ರ್ಯ ಗಳಿಸುವುದು ಸಹ ಅಷ್ಟೇ ಮುಖ್ಯವಾಗಿತ್ತು ಎಂದು ಭಾವಿಸುವವರಿಗೆ ಅಂಬೇಡ್ಕರ್ ಮತ್ತು ಗಾಂಧಿ ಇಬ್ಬರು ಮಹತ್ವದ ವ್ಯಕ್ತಿಗಳಾಗಿ ಕಾಣುತ್ತಾರೆ...

ಹಾಗೆಯೇ ಸಂವಿಧಾನಾತ್ಮಕ ಪ್ರಜಾಪ್ರಭುತ್ವವನ್ನು ಉಳಿಸುವ ಮತ್ತು ನೈತಿಕ ಮೌಲ್ಯಗಳನ್ನು ಬೆಳೆಸುವ ಮನಸ್ಸಿರುವವರಿಗೆ ಗಾಂಧಿ ಮತ್ತು ಅಂಬೇಡ್ಕರ್ ಆದರ್ಶಗಳಾಗಿಯೇ ಕಾಣುತ್ತಾರೆ.......

ವೈಯಕ್ತಿಕ ಸ್ವಾರ್ಥದ, ದ್ವೇಷಭಾವನೆಯ, ಇತಿಹಾಸದ ಸಂಘರ್ಷವನ್ನು ಈಗಲೂ ಜೀವಂತವಿಡುವ ಮನೋಭಾವದ ಕೆಲವರಿಗೆ ಅಂಬೇಡ್ಕರ್ – ಗಾಂಧಿ ಅಜನ್ಮ ಶತ್ರುಗಳ ರೀತಿಯೇ ಕಾಣುತ್ತಾರೆ......

ವರ್ಣಾಶ್ರಮ ವ್ಯವಸ್ಥೆಯ ಆಚರಣೆ ಆಳವಾಗಿ ಬೇರೂರಿದ್ದ 1869 ರಲ್ಲಿ ಗುಜರಾತಿನ ಅತ್ಯಂತ ಮೇಲ್ವರ್ಗದ ಬನಿಯಾ ಜಾತಿಯಲ್ಲಿ ಗಾಂಧಿ ಹುಟ್ಟಿದರೆ, ಮುಟ್ಟಿಸಿಕೊಳ್ಳದ ಊರ ಹೊರಗಿನ ಅಸ್ಪೃಶ್ಯ ಮಹರ್ ಜಾತಿಯಲ್ಲಿ 1891 ರಲ್ಲಿ ಅಂಬೇಡ್ಕರ್ ಜನಿಸುತ್ತಾರೆ. ಈಗ ಯೋಚಿಸಿ ನೋಡಿ ಯಾರ ಮನಸ್ಥಿತಿ, ಯಾರ ಪರಿಸ್ಥಿತಿ, ಯಾರ ಆದ್ಯತೆ ಏನೇನಾಗಿರಬಹುದು ಎಂದು....

ಸಹಜವಾಗಿಯೇ ಗಾಂಧಿಗೆ ಭಾರತದ ಸ್ವಾತಂತ್ರ್ಯ ವಿಮೋಚನೆ ಬಹಳ ಮುಖ್ಯವಾದರೆ, ಅಂಬೇಡ್ಕರ್ ಅವರಿಗೆ ದಲಿತ ವಿಮೋಚನೆ ಅತ್ಯಂತ ಪ್ರಮುಖವಾಗುತ್ತದೆ. ಅದೃಷ್ಟವೋ, ದುರಾದೃಷ್ಟವೋ ಆ ಕಾಲಘಟ್ಟದಲ್ಲಿ ಇಬ್ಬರು ದೇಶದ – ವಿಶ್ವದ ಮಹೋನ್ನತ ಚಿಂತಕರು – ಹೋರಾಟಗಾರರು ಪರಸ್ಪರ ಮುಖಾಮುಖಿಯಾಬೇಕಾಗುತ್ತದೆ. ಆಗ ಸಹಜವಾಗಿ ವಿಚಾರ ಸಂಘರ್ಷವು ಏರ್ಪಡುತ್ತದೆ. ಅದನ್ನು ವಿಮರ್ಶಿಸುವ, ಅರಿಯುವ, ಅಳವಡಿಸಿಕೊಳ್ಳುವ, ತಿರಸ್ಕರಿಸುವ, ವಿರೋಧಿಸುವ ಎಲ್ಲಾ ಸಾಧ್ಯತೆಗಳ ಅದೃಷ್ಟಶಾಲಿಗಳು ನಾವಾಗಿದ್ದೇವೆ. ಆದರೆ ಕೆಲವೇ ಕೆಲವು ಜನರು ಮಾತ್ರ ಅತಿರೇಕದ ವಿಚಾರಗಳಿಗೆ ಮರುಳಾಗಿ ಒಬ್ಬರಿಗೊಬ್ಬರು ದ್ವೇಷಿಸುವ ವಾತಾವರಣಕ್ಕೆ ನೀರೆರೆಯುತ್ತಿದ್ದಾರೆ......

ಹೌದು, ಗಾಂಧಿಯವರನ್ನು ದಲಿತ ಸಮುದಾಯಗಳು ವಿರೋಧಿಸಲು ಸಾಕಷ್ಟು ಕಾರಣಗಳು ಸಿಗುತ್ತವೆ ಎಂಬುದು ನಿಜ. ಗಾಂಧಿ ಪ್ರಾರಂಭದ ಹಂತದಲ್ಲಿ ಸನಾತನ ಧರ್ಮದ ಮೂಲ ಬೇರಾದ ವರ್ಣಾಶ್ರಮ ವ್ಯವಸ್ಥೆಯನ್ನು ಒಪ್ಪಿಕೊಂಡಿದ್ದರು. ಅದರ ಆಚರಣೆಯನ್ನು ಪ್ರತಿಪಾದಿಸುತ್ತಿದ್ದರು. ಆದರೆ ಅಂಬೇಡ್ಕರ್ ಅವರ ಅಧ್ಯಯನ, ಹೋರಾಟ ಮತ್ತು ಭಾರತದ ಸಾಮಾಜಿಕ ಮತ್ತು ರಾಜಕೀಯ ಹೋರಾಟದ ಫಲವಾಗಿ ಗಾಂಧಿಯವರಿಗೆ ಜಾತಿ ಪದ್ಧತಿಯ ಕರಾಳ ಮುಖದ ಪರಿಚಯವಾಗುತ್ತದೆ. ಆಗ ಅವರು ಪರಿವರ್ತನೆ ಹೊಂದಿ ಊರ ಹೊರಗೆ ಮುಟ್ಟಿಸಿಕೊಳ್ಳದ ಸಮುದಾಯಗಳ ಬಗ್ಗೆ ಸಾಕಷ್ಟು ಕಾಳಜಿ ವಹಿಸುತ್ತಾರೆ. ಅಂಬೇಡ್ಕರ್ ಅವರಷ್ಟು ಆಳವಾಗಿ ಮತ್ತು ಮನಃಪೂರ್ವಕವಾಗಿ ಅಲ್ಲದಿದ್ದರು ಕನಿಷ್ಠ ಪ್ರಜ್ಞಾಪೂರ್ವಕವಾಗಿ ಆ ಬಗ್ಗೆ ಮಾತನಾಡುತ್ತಾರೆ ಮತ್ತು ಸುಧಾರಣೆಗೆ ಪ್ರಯತ್ನಿಸುತ್ತಾರೆ. ಅದನ್ನು ಗಮನಿಸಬೇಕು.... ..

ಅಸ್ಪೃಶ್ಯ ಸಮುದಾಯಗಳನ್ನು ಕನಿಷ್ಠ ಸ್ಪೃಶ್ಯ ಮಾಡುವ ಆಲೋಚನೆಯಿಂದ ಅವರನ್ನು ಹರಿಜನ ಅಂದರೆ ದೇವರ ಮಕ್ಕಳು ಎಂದು ಕರೆದು ಜನರಲ್ಲಿರು ದೇವರ ಬಗೆಗಿನ ಭಕ್ತಿಯನ್ನು ಉಪಯೋಗಿಸಿಕೊಂಡು ಅವರನ್ನು ಸಮಾಜದ ಸಹ್ಯ ಸಮುದಾಯವಾಗಿ ಮಾಡಲು ಒಂದು ಹಂತದಲ್ಲಿ ಸಣ್ಣದಾಗಿ ಪ್ರಯತ್ನಿಸುತ್ತಾರೆ......

ಅತ್ಯಂತ ಪ್ರಮುಖವಾಗಿ ಕೆಲವು ವೈಚಾರಿಕ ಉಗ್ರ ದಲಿತ ನಾಯಕರು ಮತ್ತು ಚಿಂತಕರಿಗೆ ಗಾಂಧಿಯವರ ಬಗ್ಗೆ ಈಗಲೂ ದ್ವೇಷ ಈ ಮಟ್ಟದಲ್ಲಿ ಉಳಿಯಲು ಕಾರಣ "ಪೂನ ಒಪ್ಪಂದಕ್ಕೆ" ಗಾಂಧಿಯವರು ತೋರಿದ ಅತ್ಯುಗ್ರ ಉಪವಾಸದ ವಿರೋಧ ಮತ್ತು ಅದರಲ್ಲಿ ಅವರು ಯಶಸ್ವಿಯಾಗಿದ್ದು, ಅದಕ್ಕೆ ಅಂಬೇಡ್ಕರ್ ಅವರು ತೋರಿದ ಪ್ರತಿರೋಧ – ಹತಾಶೆ ಮತ್ತು ಆ ನಂತರ ಅವರ ಪ್ರತಿಕ್ರಿಯೆಗಳು ಕಟ್ಟಾ ದಲಿತರಲ್ಲಿ ಗಾಂಧಿಯವರನ್ನು ವಿರೋಧ ಮೀರಿ ದ್ವೇಷಿಸಲು ಕಾರಣವಾಗಿದೆ....

ಹೌದು, ಅಸ್ಪೃಶ್ಯತಾ ನಿವಾರಣೆ, ದಲಿತ ರಕ್ಷಣೆ ಮತ್ತು ಸಬಲೀಕರಣ, ದಲಿತ ಅಸ್ಮಿತೆಯ ಜಾಗೃತಿ, ಶತಮಾನಗಳ ಶೋಷಣೆಗೆ ಒಂದಷ್ಟು ಶಾಶ್ವತ ಪರಿಹಾರ ಮತ್ತು ಒಟ್ಟಾರೆ ದಲಿತ ಅಭ್ಯುದಯದ ದೃಷ್ಟಿಯಿಂದ "ಪೂನಾ ಮೀಸಲಾತಿ ಒಪ್ಪಂದ" ಅತ್ಯಂತ ಮಹತ್ವದ್ದು. ಈಗಿನ ಸಂದರ್ಭದಲ್ಲಿ ಯೋಚಿಸಿದರೆ ಅದು ಆಗ ಜಾರಿಯಾಗಿದ್ದರೆ ದಲಿತರ ಪರಿಸ್ಥಿತಿ ಈಗಿ ಇರುವುದಕ್ಕಿಂತ ಉತ್ತಮ ಮಟ್ಟದಲ್ಲಿ ಇರುತ್ತಿತ್ತು ಎಂದು ಖಂಡಿತ ಭಾವಿಸಬಹುದು. ಅದನ್ನು ಅಂದು ಅತ್ಯಂತ ಪ್ರಬಲವಾಗಿ ವಿರೋಧಿಸಿದ ಗಾಂಧಿ ದಲಿತ ಸಮುದಾಯಗಳ ಕೋಪಕ್ಕೆ ಅರ್ಹರು ಎಂಬುದು ಸಹ ಅಷ್ಟೇ ನಿಜ. ಆದರೆ......

ಆದರೆ ಗಾಂಧಿಯ ಒಟ್ಟು ಬದುಕನ್ನು, ಹೋರಾಟವನ್ನು ವ್ಯಕ್ತಿತ್ವವನ್ನು, ಆಗಿನ ಕಾಲಘಟ್ಟದ ಪರಿಸ್ಥಿತಿಯನ್ನು ಅವಲೋಕಿಸಿದರೆ ಅವರು ಆ ಒಂದು ವಿಷಯದಲ್ಲಿ ದಲಿತರ ಕ್ಷಮೆಗೆ ಅರ್ಹರು. ಏಕೆಂದರೆ ಅವರ ಆಗಿನ ಉದ್ದೇಶ ಸೂಕ್ಷ್ಮವಾಗಿ ಪರಿಶೀಲಿಸಿದರೆ ಸನಾತನ ಧರ್ಮದ ರಕ್ಷಣೆ ಮತ್ತು ಸ್ವಾತಂತ್ರ್ಯ ಪಡೆಯಲು ಒಗ್ಗಟ್ಟನ್ನು ಕಾಪಾಡುವುದು ಮುಖ್ಯವಾಗಿತ್ತೇ ಹೊರತು ದಲಿತರನ್ನು ಕೆಳ ಹಂತದಲ್ಲಿಯೇ ಉಳಿಸಿ ಅವರನ್ನು ಶೋಷಿಸುವುದಲ್ಲ ಮತ್ತು ಅವರಿಗೆ ಅನ್ಯಾಯ ಮಾಡುವುದಲ್ಲ. ಖಂಡಿತ ಗಾಂಧಿ ಅಷ್ಟೊಂದು ಪ್ರಜ್ಞಾಪೂರ್ವಕ ಕೆಟ್ಟ ಮನಸ್ಥಿತಿಯವರಲ್ಲ.....

ಕೆಲವರು ಒಂದಷ್ಟು ಗಾಂಧಿಯವರ ಬರಹಗಳು ಮತ್ತು ಹೇಳಿಕೆಗಳು ಹೇಗೆ ದಲಿತ ವಿರೋಧಿಯಾಗಿವೆ ಮತ್ತು ಅಮಾನವೀಯವಾಗಿದೆ ಎಂಬುದನ್ನು ದಾಖಲೆಗಳ ಸಮೇತ ವಿವರಿಸುತ್ತಾರೆ. ಅದು ಬಹಳಷ್ಟು ನಿಜವೂ ಸಹ. ಆದರೆ ಅದರಲ್ಲಿ ಕೆಲವು ಗಾಂಧಿ ಪರಿವರ್ತನೆ ಹೊಂದುವ ಮೊದಲಿನ ಅಭಿಪ್ರಾಯ ಮತ್ತು ಅಂಬೇಡ್ಕರ್ ಅವರೊಂದಿಗೆ ಸಂಘರ್ಷದಲ್ಲಿ ಮೂಡಿದ್ದು ಜೊತೆಗೆ ಕೆಲವು ಸನ್ನಿವೇಶಗಳಲ್ಲಿ ಬೇರೆಯದೇ ಉದ್ದೇಶದಿಂದ ಹೇಳಿದ್ದು ಆಗಿವೆ. ಒಮ್ಮೆ ಒಬ್ಬ ವ್ಯಕ್ತಿಯನ್ನು ದ್ವೇಷಿಸಲು ಪ್ರಾರಂಭಿಸಿದರೆ ಆ ವ್ಯಕ್ತಿಯ ಎಲ್ಲಾ ಮಾತುಗಳು ಹಾಗೆಯೇ ಪ್ರತಿಧ್ವನಿಸುವ ಮನಃಶಾಸ್ತ್ರೀಯ ಗುಣಗಳನ್ನು ಇಲ್ಲಿ ನೆನಪಿಸಿಕೊಳ್ಳಬಹುದು...

ಪೂನಾ ಒಪ್ಪಂದದ ಸಂಪೂರ್ಣ ಮಾಹಿತಿಯನ್ನು ಅನೇಕ ಇತಿಹಾಸದ ಪುಸ್ತಕಗಳು ಮತ್ತು ಗೂಗಲ್ ಸರ್ಚನಲ್ಲಿ ಪಡೆಯ ಬಹುದು. ಅದನ್ನು ಇಲ್ಲಿ ಪ್ರಸ್ತಾಪಿಸಿದರೆ ತುಂಬಾ ದೀರ್ಘವಾಗುತ್ತದೆ. ಆದರೆ ಧಾರ್ಮಿಕ ಮತ್ತು ಆಧ್ಯಾತ್ಮಿಕ ಒಲವಿನ ಗಾಂಧಿಯವರಿಗೆ ಅಸ್ಪೃಶ್ಯ ದಲಿತ ಸಮುದಾಯಗಳು ಸನಾತನ ಧರ್ಮದ ಹಿಂದೂ ಜೀವನಶೈಲಿಯ ಭಾಗವೇ ಎಂದು ಸ್ಪಷ್ಟವಾಗಿ ಮತ್ತು ಬಲವಾಗಿ ನಂಬಿದ್ದರು. ಅವರಿಗೆ ಪ್ರತ್ಯೇಕ ಮೀಸಲಾತಿ ನೀಡಿದರೆ ನಮ್ಮ ಧರ್ಮ ಒಡೆದು ಹೋಗುತ್ತದೆ ಮತ್ತು ದಲಿತರು ಪ್ರತ್ಯೇಕವಾಗುತ್ತಾರೆ ಎಂಬ ಆತಂಕ ಸದಾ ಕಾಡುತ್ತಿರುತ್ತದೆ. ಅವರು ನಮ್ಮಂತೆ ಮನುಷ್ಯರು. ಏನೋ ಕಾರಣದಿಂದಾಗಿ ಪ್ರತ್ಯೇಕವಾಗಿದ್ದಾರೆ. ನಮ್ಮ ಮನಸ್ಥಿತಿಯನ್ನು ಬದಲಾಯಿಸಿಕೊಳ್ಳುವ ಮೂಲಕ ಮತ್ತು ಸ್ವಾತಂತ್ರ್ಯ ನಂತರ ಈ ದೇಶದಿಂದ ಅಸ್ಪೃಶ್ಯತೆಯನ್ನು ಸಂಪೂರ್ಣ ನಿವಾರಿಸಿಕೊಳ್ಳಬಹುದು ಎಂದು ಬಲವಾಗಿ ನಂಬಿರುತ್ತಾರೆ. ಅಷ್ಟೊಂದು ವಿಶಾಲ ಹೃದಯಿಯವರು. ಆದರೆ ಜಾತಿಯ ಮೂಲಭೂತವಾದಿಗಳ ನಡುವೆ ಅದು ಅಸಾಧ್ಯ, ಮರ್ಯಾದ ಹತ್ಯೆಗೂ ನಮ್ಮ ಜನ ಸಿದ್ದರಿದ್ದಾರೆ ಎಂಬುದನ್ನು ಗ್ರಹಿಸಲು ಅವರು ವಿಫಲರಾಗುತ್ತಾರೆ. ಅದರ ಪರಿಣಾಮ ಗಾಂಧಿ ಶಾಶ್ವತವಾಗಿ ಕೆಲವು ದಲಿತ ನಾಯಕರ ವಿರೋಧಿಗಳಾಗಿಯೇ ಉಳಿದರು.....

ಅಂಬೇಡ್ಕರ್ ಅವರಿಗೆ ಹೋಲಿಸಿದರೆ ದಲಿತ ಶೋಷಣೆಗೆ ಗಾಂಧಿಯವರ ಕೊಡುಗೆ ಅತ್ಯಲ್ಪ. ಕೊನೆಯ ಹಂತದಲ್ಲಿ ಎಲ್ಲರ ಪ್ರತಿರೋಧದ ನಡುವೆಯೂ ದಲಿತರನ್ನು ಮುಖ್ಯವಾಹಿನಿಗೆ ಸೇರಿಸಲು ತಾವು ಸೇರಿ ಅನೇಕ ಒತ್ತಡಗಳನ್ನು ನಿರ್ಮಿಸುತ್ತಾರೆ ಮತ್ತು ಆಚರಣೆಗೆ ತರುತ್ತಾರೆ. ಆದರೆ ಅಂಬೇಡ್ಕರ್ ದೃಷ್ಟಿಯಲ್ಲಿ ಅದು ಕೇವಲ ನಾಟಕ ಎಂದು ಟೀಕೆಗೆ ಒಳಗಾಗುತ್ತದೆ. ಒಂದು ಹಂತದಲ್ಲಿ ಅಂಬೇಡ್ಕರ್ ಗಾಂಧಿಯವರನ್ನು ಅನೇಕ ಹತಾಶೆಗಳ ಕಾರಣ ಸಾಕಷ್ಟು ವಿರೋಧಿಸುತ್ತಾರೆ. ಆಗಿನ ದೇಶದ ನಾಯಕತ್ವ ಗಾಂಧಿಯವರ ಬಳಿ ಇದ್ದುದರಿಂದ ಸಹಜವಾಗಿಯೇ ಅವರನ್ನೇ ಪ್ರಶ್ನಿಸಬೇಕಾಗುತ್ತದೆ. ಆದರೆ ಅದು ಈಗಿನ ಕಾಲಘಟ್ಟಕ್ಕೆ ಅಷ್ಟು ಸೂಕ್ತವಾಗುವುದಿಲ್ಲ.....

ಅಂಬೇಡ್ಕರ್ ಅವರೊಂದಿಗೆ ಮತ್ತು ಅವರಿಗಾಗಿ ಗಾಂಧಿ ಸಂಘರ್ಷ ನಡೆಸುತ್ತಾರೆ, ಉಪವಾಸ ಮಾಡುತ್ತಾರೆ, ಗಾಂಧಿ ಅತ್ಯಂತ ಪ್ರಬಲವಾಗಿದ್ದ ಕಾಲದಲ್ಲಿಯೇ ಅಂಬೇಡ್ಕರ್ ಸಂವಿಧಾನ ಕರಡು ರಚನಾ ಸಮಿತಿಯ ಅಧ್ಯಕ್ಷರಾಗುತ್ತಾರೆ, ಪ್ರಾರಂಭದ ನೆಹರು ಸಂಪುಟದಲ್ಲಿ ಮಂತ್ರಿಯಾಗುತ್ತಾರೆ ಎಂಬುದು ಗಾಂಧಿ ಅಂಬೇಡ್ಕರ್ ಅವರನ್ನು ಈಗಿನ ಉಗ್ರ ದಲಿತರು ವಿರೋಧಿಸುವಷ್ಟು ಮತ್ತು ಭಾವಿಸುವಷ್ಟು ಗಾಂಧಿ ದ್ವೇಷಿಸುತ್ತಿರಲಿಲ್ಲ ಎಂಬುದಕ್ಕೆ ಸಾಕಷ್ಟು ಪುರಾವೆ ಒದಗಿಸುತ್ತದೆ.....

ಇರಲಿ, ಏನೇ ಆಗಲಿ ಗಾಂಧಿ ಮತ್ತು ಅಂಬೇಡ್ಕರ್ ಅವರಿಗೆ ಅವರು ಬಯಸಿದಂತೆ ಅಭಿಪ್ರಾಯ ರೂಪಿಸಿಕೊಳ್ಳುವ, ಹೋರಾಡುವ, ಬದುಕುವ ಸಂಪೂರ್ಣ ಸ್ವಾತಂತ್ರ್ಯವಿದೆ ಹಾಗೆಯೇ ಅದನ್ನು ವಿಮರ್ಶಿಸುವ ಸ್ವಾತಂತ್ರ್ಯ ಮತ್ತು ಅವರ ಬಗ್ಗೆ ಯಾವುದೇ ಅಭಿಪ್ರಾಯ ಹೊಂದುವ ಸ್ವಾತಂತ್ರ್ಯ ನಮಗೂ ಇದೆ. ಆದರೆ ಇತಿಹಾಸ ವರ್ತಮಾನಕ್ಕೆ ಪಾಠವಾಗಬೇಕೆ ಹೊರತು ದ್ವೇಷದ ಹೊರೆಯಾಗಬಾರದು...

ಗಾಂಧಿಯನ್ನು ವಿರೋಧಿಸುವ ಸ್ವಾತಂತ್ರ್ಯ ಎಲ್ಲರಿಗೂ ಇದೆ. ಆದರೆ ಅವರನ್ನು ಅತ್ಯುಗ್ರವಾಗಿ ದ್ವೇಷಿಸಿದರೆ ಅದು ಮುಖ್ಯವಾಗಿ ದಲಿತ ಚಳವಳಿಗೆ ಸ್ವಲ್ಪ ಹಿನ್ನಡೆಯಾಗಬಹುದು ಮತ್ತು ಅದನ್ನು ಮತ್ತೆ ಮತ್ತೆ ಮುನ್ನಲೆಗೆ ತರುವುದು ಸಹ ಅನವಶ್ಯಕ ಎಂದು ಅತ್ಯಂತ ಆತ್ಮೀಯವಾಗಿ, ಪ್ರೀತಿಯಿಂದ, ಕಾಳಜಿಯಿಂದ ಎಚ್ಚರಿಸುತ್ತಾ.....

ಈಗ ಗಾಂಧಿ ಮತ್ತು ಅಂಬೇಡ್ಕರ್ ಇಬ್ಬರೂ ಇಲ್ಲ. ಆದರೆ ನಾವಿದ್ದೇವೆ. ನಮಗೆ ಅನುಭವವಿದೆ, ಅರಿವಿದೆ, ಅವಕಾಶವಿದೆ. ನಾವುಗಳು ಸಮ ಸಮಾಜದ ನಿರ್ಮಾಣಕ್ಕಾಗಿ ಏನನ್ನಾದರೂ ಮಾಡೋಣ. ಗಾಂಧಿಯನ್ನು ದ್ವೇಷಿಸುತ್ತಾ ಕಾಲ ಕಳೆಯುವ ಬದಲು ಕಟ್ಟುವ ಕೆಲಸ ಮಾಡೋಣ. ....

ಕೊನೆಯದಾಗಿ, ಗಾಂಧಿ ಪರಿಪೂರ್ಣರೇನು ಅಲ್ಲ. ಆದರೆ ಅತ್ಯಂತ ಉಗ್ರವಾಗಿ ದ್ವೇಷಿಸುವಷ್ಟು ಕೆಟ್ಟವರು ಅಲ್ಲ. ನೈತಿಕತೆಗೆ ಗಾಂಧಿ ಸಾಕ್ಷಿ ಪ್ರಜ್ಞೆ, ಮಾನವೀಯತೆಗೆ, ಸಾಮಾಜಿಕ ಸಾಮರಸ್ಯಕ್ಕೆ ಅಂಬೇಡ್ಕರ್ ಸಾಕ್ಷಿ ಪ್ರಜ್ಞೆ ಎಂಬ ಬುದ್ಧ ಪ್ರಜ್ಞೆ ನಮ್ಮೆಲ್ಲರಲ್ಲಿ ಮೂಡಲಿ ಎಂದು ಆಶಿಸುತ್ತಾ.....

ಇದು ಸರಳ ನಿರೂಪಣೆ ಮಾತ್ರ. ಆಳವಾಗಿ ಮತ್ತಷ್ಟು ಚರ್ಚೆ ಬಯಸುವ ವಿಷಯ. ಅದನ್ನು ಆಸಕ್ತರು ಸಮಯವಾದಾಗ ನೇರವಾಗಿ ಮಾತನಾಡೋಣ...

ಧನ್ಯವಾದಗಳು....

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T